# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ
EDITOR: MAHESHWARI BHIMASHI BHARAMANNAVARA

BELAGAVI VARTE
KANNADA DAILY MORNING BELAGAVI

G-mail: belagavivarte1@gmail.com
epaper. belagavivarte.com
G2/PMG/KA/NK/BM/157/26-28

Volume: 01 | Issue : 55 | TUESDAY 05-05-2026 | PRGI No : KNKAN/26/A0962 | Pages:4 | Rs.2.00 | M: 9742418836


## ದಾವಣಗೆರೆ ಉಪ ಚುನಾವಣೆ: ಸಮರ್ಥ್ ಶಾಮನೂರು ಪ್ರಯಾಸದ ಗೆಲುವು; ಕಾಂಗ್ರೆಸ್ ಗೆಲುವಿನ ಅಂತರ ಎಷ್ಟು?



ದಾವಣಗೆರೆ: ಆಡಳಿತಾರೂಢ ಕಾಂಗ್ರೆಸ್ ಹಾಗೂ ಪ್ರತಿಪಕ್ಷ ಬಿಜೆಪಿ ನಡುವೆ ತೀವ್ರ ಜಿದ್ದಾಜಿದ್ದಿಗೆ ಕಾರಣವಾಗಿದ್ದ ದಾವಣಗೆರೆ ದಕ್ಷಿಣ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ, ಶಾಮನೂರು ಶಿವಶಂಕರಪ್ಪ ಅವರ ಮೊಮ್ಮಗ ಸಮರ್ಥ್ ಶಾಮನೂರು ಕೊನೆಗೂ ಪ್ರಯಾಸದ ಗೆಲುವು ದಾಖಲಿಸಿದ್ದಾರೆ.

ಐದು ರಾಜ್ಯಗಳ ಚುನಾವಣೆ ಫಲಿತಾಂಶದೊಂದಿಗೆ ದಾವಣಗೆರೆ ದಕ್ಷಿಣ ಹಾಗೂ ಬಾಗಲಕೋಟೆ ಉಪ ಚುನಾವಣೆಯ ಫಲಿತಾಂಶ ಸೋಮವಾರ ಪ್ರಕಟವಾಗಿದ್ದು, ಆಡಳಿತರೂಢ ಕಾಂಗ್ರೆಸ್ ಎರಡೂ ಕ್ಷೇತ್ರಗಳಲ್ಲಿ ಗೆದ್ದು ಬೀಗಿದೆ.

ತೀವ್ರ ಕುತೂಹಲ ಕೆರಳಿಸಿದ್ದ ದಾವಣಗೆರೆ ದಕ್ಷಿಣದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಸಮರ್ಥ್ ಶಾಮನೂರು ಅವರು ಬಿಜೆಪಿ ಅಭ್ಯರ್ಥಿ ಶ್ರೀನಿವಾಸ ದಾಸಕರಿಯಪ್ಪ ಅವರ ವಿರುದ್ಧ 4967 ಮತಗಳ ಅಂತರದಿಂದ ಗೆದ್ದಿದ್ದು, 20ನೇ ಸುತ್ತಿನ ಎಣಿಕೆ ಬಳಿಕ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ಅವರ ಬೆಂಬಲಿಗರು ವಿಜಯೋತ್ಸವ ಆಚರಿಸಿದರು.

ಮತದಾನ ಆರಂಭಗೊಂಡ ಮೊದಲ 6 ಸುತ್ತಿನಲ್ಲಿಯೂ ಸಮರ್ಥ್ ಶಾಮನೂರು ಹಿನ್ನಡೆ ಕಾಯ್ದುಕೊಂಡಿದ್ದು, 7ನೇ ಸುತ್ತಿನಲ್ಲೂ ಬಿಜೆಪಿ ಅಭ್ಯರ್ಥಿ ಶ್ರೀನಿವಾಸ ದಾಸಕರಿಯಪ್ಪ ಮುನ್ನಡೆಯಲ್ಲಿದ್ದರು. ಆದರೆ 8 ಹಾಗೂ 9ನೇ ಸುತ್ತಿನಲ್ಲಿ ಅಂಕಿ–ಸಂಖ್ಯೆ ಉಲ್ಟಾ ಆಗಿದೆ. ಕೊನೆಗೆ ಈ ರಣಕಣದಲ್ಲಿ ಗೆಲುವು ಕಾಂಗ್ರೆಸ್ ಅಭ್ಯರ್ಥಿ ಸಮರ್ಥ್? ಶಾಮನೂರು ಪಾಲಾಗಿದೆ.

## ಕೇರಳದಲ್ಲಿ ಕಾಂಗ್ರೆಸ್ ಉತ್ತಮ ಪ್ರದರ್ಶನ; ಪಶ್ಚಿಮ ಬಂಗಾಳ, ತಮಿಳುನಾಡಿನಲ್ಲಿ ಆಡಳಿತ ವಿರೋಧಿ ಅಲೆ ಪ್ರಭಾವ ಬೀರಿದೆ: ಸಿದ್ದರಾಮಯ್ಯ

ಬೆಂಗಳೂರು: ಹಲವಾರು ರಾಜ್ಯಗಳಲ್ಲಿ ಕಾಂಗ್ರೆಸ್ ನಿರೀಕ್ಷೆಗಳನ್ನು ಪೂರೈಸಿದೆ ಅಥವಾ ಮೀರಿದೆ. ಕೆಲವು ಪ್ರದೇಶಗಳಲ್ಲಿನ ಫಲಿತಾಂಶಗಳು ಬದಲಾಗುತ್ತಿರುವ ಮತದಾರರ ಭಾವನೆಗಳನ್ನು ಪ್ರತಿಬಿಂಬಿಸುತ್ತವೆ ಎಂದು ಪಂಚರಾಜ್ಯಗಳ ಚುನಾವಣಾ ಫಲಿತಾಂಶ ಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯ ಸೋಮವಾರ ಹೇಳಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇರಳದಲ್ಲಿ ನಿರೀಕ್ಷೆಗಿಂತ ಉತ್ತಮ ಪ್ರದರ್ಶನ ನೀಡಿದ್ದರೂ, ಪಕ್ಷವು ಅಸ್ಸಾಂನಲ್ಲಿ ಜನಾದೇಶವನ್ನು ಒಪ್ಪಿಕೊಂಡಿದೆ ಎಂದು ಹೇಳಿದರು.

'ಅಸ್ಸಾಂನಲ್ಲಿ, ನಾವು ನಿರೀಕ್ಷಿತ ಫಲಿತಾಂಶವನ್ನು ಪಡೆದುಕೊಂಡಿದ್ದೇವೆ ಮತ್ತು ನಾವು ಜನರ ಜನಾದೇಶವನ್ನು ಸ್ವೀಕರಿಸುತ್ತೇವೆ. ಕೇರಳದಲ್ಲಿ, ನಾವು ನಿರೀಕ್ಷೆಗಿಂತ ಹೆಚ್ಚಿನ ಸ್ಥಾನಗಳನ್ನು ಗೆದ್ದಿದ್ದೇವೆ. ನಾವು ಸುಮಾರು 76 ರಿಂದ 80 ಸ್ಥಾನಗಳನ್ನು ನಿರೀಕ್ಷಿಸಿದ್ದೆವು. ಆದರೆ, ನಾವು ಸುಮಾರು 95 ಸ್ಥಾನಗಳಿಗೆ ಏರಿದ್ದೇವೆ' ಎಂದು ಸಿದ್ದರಾಮಯ್ಯ ಹೇಳಿದರು.

ಪಶ್ಚಿಮ ಬಂಗಾಳ ಮತ್ತು ತಮಿಳುನಾಡಿನಲ್ಲಿ ಆಡಳಿತ ವಿರೋಧಿ ಅಲೆ ಇದ್ದಿರಬಹುದು ಮತ್ತು ಅದು ಫಲಿತಾಂಶಗಳ ಮೇಲೆ ಪ್ರಭಾವ ಬೀರಿರಬಹುದು ಎಂದ ಅವರು, ತಮಿಳುನಾಡಿನಲ್ಲಿ ಹೊಸದಾಗಿ ರಾಜಕೀಯ ಪ್ರವೇಶ ಪಡೆದ ಅಭ್ಯರ್ಥಿಗೆ ಅಭಿನಂದನೆ ಸಲ್ಲಿಸಿದರು ಮತ್ತು ರಾಜ್ಯದಲ್ಲಿನ ವಿಭಿನ್ನ ಚುನಾವಣಾ ಚಲನಶೀಲತೆಯ ಹೊರಹೊಮ್ಮುವಿಕೆಯನ್ನು ಗಮನಿಸಿದರು.



ಡಿಸಿಎಂ ಡಿಕೆ ಶಿವಕುಮಾರ್ ಪ್ರತಿಕ್ರಿಯೆ

ಕೆಲವು ರಾಜ್ಯಗಳಲ್ಲಿನ ಚುನಾವಣಾ ಫಲಿತಾಂಶಗಳು ಪಕ್ಷದ ಆಂತರಿಕ ಮೌಲ್ಯಮಾಪನಗಳಿಗಿಂತ ಭಿನ್ನವಾಗಿವೆ. ಇದು ಮತದಾರರ ನಿರೀಕ್ಷೆಗಳನ್ನು ಪ್ರತಿಬಿಂಬಿಸುತ್ತದೆ ಎಂದು ಉಪಮುಖ್ಯ ಮಂತ್ರಿ ಡಿಕೆ ಶಿವಕುಮಾರ್ ಹೇಳಿದರು.

'ನಾವು ಒಂದು ನಿರ್ದಿಷ್ಟ ಪ್ರವೃತ್ತಿಯನ್ನು ನಿರೀಕ್ಷಿಸಿದ್ದೆವು. ಆದರೆ, ಫಲಿತಾಂಶಗಳು ವಿಭಿನ್ನವಾಗಿವೆ. ಕೆಲವು ಸ್ಥಳಗಳಲ್ಲಿ ರಾಜಕೀಯ ಓದುವಿಕೆ ತಪ್ಪಾಗಿದೆ. ಕೆಲವು ರಾಜ್ಯಗಳಲ್ಲಿ ಜನರು ಬದಲಾವಣೆಯನ್ನು ಹುಡುಕುತ್ತಿದ್ದರು ಮತ್ತು ಅದು ಫಲಿತಾಂಶಗಳಲ್ಲಿ ಪ್ರತಿಫಲಿಸಿದೆ' ಎಂದು ಹೇಳಿದರು.

ಕೇರಳವನ್ನು ಉಲ್ಲೇಖಿಸಿ, ಕಾಂಗ್ರೆಸ್ ನೇತೃತ್ವದ ಮೈತ್ರಿಕೂಟವು ಸಾರ್ವಜನಿಕ ಭಾವನೆಯಿಂದ ಪ್ರಯೋಜನ ಪಡೆದಿದೆ. ಸ್ಥಳೀಯ ಸಂಸ್ಥೆಗಳ ಚುನಾವಣೆಗಳ ಆಧಾರದ ಮೇಲೆ ಈಗಾಗಲೇ ಒಂದು ನಿರೀಕ್ಷೆ ಇತ್ತು ಮತ್ತು ಜನರು ನಮ್ಮ ಮೇಲೆ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಅದು ಬಲವಾದ ಫಲಿತಾಂಶಕ್ಕೆ ಕಾರಣವಾಗಿದೆ ಎಂದರು.

ತಮಿಳುನಾಡಿನ ಬಗ್ಗೆ ಮಾತನಾಡಿದ ಅವರು, ರಾಜಕೀಯ ಬದಲಾವಣೆಯ ಪ್ರಮಾಣವು ಆಶ್ಚರ್ಯಕರವಾಗಿದೆ. ನಾವು ಸುಮಾರು ಶೇ 30ರಿಂದ 40ರಷ್ಟು ಮತ ಹಂಚಿಕೆಯನ್ನು ಪಡೆಯುತ್ತೇವೆ ಎಂದು ನಿರೀಕ್ಷಿಸಿದ್ದೆವು. ಆದರೆ, ಅಂತಹ ಪ್ರಮುಖ ಬದಲಾವಣೆಯನ್ನು ನಿರೀಕ್ಷಿಸಿರಲಿಲ್ಲ. ಮತದಾರರ ನಿರೀಕ್ಷೆಗಳು ವಿಭಿನ್ನವಾಗಿದ್ದವು ಎಂದು ಇದು ತೋರಿಸುತ್ತದೆ' ಎಂದು ಅವರು ಹೇಳಿದರು.

'ಚುನಾವಣಾ ಫಲಿತಾಂಶಗಳು ಭವಿಷ್ಯದಲ್ಲಿ ಉತ್ತಮ ರಾಜಕೀಯ ಮೌಲ್ಯಮಾಪನದ ಅಗತ್ಯವನ್ನು ಒತ್ತಿಹೇಳುತ್ತವೆ. ನಾವು ಈ ಬದಲಾವಣೆಗಳನ್ನು ಎಚ್ಚರಿಕೆಯಿಂದ ಅರ್ಥಮಾಡಿಕೊಳ್ಳಬೇಕು. ನಾವು ರಾಜಕೀಯ ಸನ್ನಿವೇಶಗಳನ್ನು ಬಹಳ ಎಚ್ಚರಿಕೆಯಿಂದ ವಿಶ್ಲೇಷಿಸಬೇಕು. ನಾವು ಹಾಗೆ ಮಾಡದಿದ್ದರೆ, ತಪ್ಪು ತೀರ್ಮಾನಗಳನ್ನು ತೆಗೆದುಕೊಳ್ಳಬಹುದು' ಎಂದು ಅವರು ಹೇಳಿದರು.

## ಅಸ್ಸಾಂನಲ್ಲಿ ಬಿಜೆಪಿ ಹ್ಯಾಟ್ರಿಕ್: ಕೇರಳಂನಲ್ಲಿ ಯುಡಿಎಫ್, ಪುದುಚೇರಿಯಲ್ಲಿ ಎನ್‌ಡಿಎ

ನವದೆಹಲಿ: ದೇಶದ ನಾಲ್ಕು ರಾಜ್ಯಗಳು ಮತ್ತು ಒಂದು ಕೇಂದ್ರಾಡಳಿತ ಪ್ರದೇಶದ ವಿಧಾನಸಭೆ ನಡೆದ ಚುನಾವಣೆಯಲ್ಲಿ ಅಸ್ಸಾಂನಲ್ಲಿ ಬಿಜೆಪಿ, ಕೇರಳದಲ್ಲಿ ಕಾಂಗ್ರೆಸ್ ನೇತೃತ್ವದ ಯುಡಿಎಫ್ ಹಾಗು ಪುದುಚೆರಿಯಲ್ಲಿ ಎನ್‌ಡಿಎ ಅಧಿಕಾರ ಹಿಡಿದಿದೆ.

ತೀವ್ರ ಕುತೂಹಲ ಕೆರಳಿಸಿದ್ದ ನಾಲ್ಕು ರಾಜ್ಯಗಳು ಮತ್ತು ಒಂದು ಕೇಂದ್ರಾಡಳಿತ ಪ್ರದೇಶದ ವಿಧಾನಸಭೆಗೆ ನಡೆದ ಮತ ಎಣಿಕೆ ಪ್ರಗತಿಯಲ್ಲಿದ್ದು ಸ್ಪಷ್ಟ ಬಹುಮತದೊಂದಿಗೆ ಅಧಿಕಾರ ಹಿಡಿಯುವತ್ತ ಹೆಜ್ಜೆ ಇಟ್ಟಿದೆ

**ಯುಡಿಎಫ್ ಕಮಾಲ್:** ಕೇರಳಂನಲ್ಲಿ ಕಳೆದ ಮೂರು ಅವಧಿಯಿಂದ ಅಧಿಕಾರ ದಲ್ಲಿದ್ದ ಮುಖ್ಯಮಂತ್ರಿ ಪಿಣರಾಯಿ ವಿಜಯನ್ ನೇತೃತ್ವದ ಎಡರಂಗದ ಎಲ್‌ಡಿಎಫ್ ಪಕ್ಷದಿಂದ ಅಧಿಕಾರ ಕಸಿದು ಕಾಂಗ್ರೆಸ್ ನೇತೃತ್ವದ ಯುಡಿಎಫ್ ಕಮಾಲ್ ಮಾಡಿದೆ.



ಸದ್ಯದ ಮುನ್ನಡೆ ಪ್ರಕಾರ ಯುಡಿಎಫ್ 140 ವಿಧಾನಸಭಾ ಕ್ಷೇತ್ರಗಳ ಪೈಕಿ ಬಹು ಮತಕ್ಕೆ ಅಗತ್ಯವಿರುವ 71 ಸ್ಥಾನಗಳನ್ನು ದಾಟಿ 99 ಸ್ಥಾನಗಳಲ್ಲಿ ಮುನ್ನಡೆ ಗಳಿಸಿದೆ. ಎಲ್ ಡಿಎಫ್ 39 , ಬಿಜೆಪಿ– 2 ಮತ್ತು ಇತರರು 12 ಕ್ಷೇತ್ರಗಳಲ್ಲಿ ಮುನ್ನಡೆ ಸಾಧಿಸಿದೆ.

**ಅಸ್ಸಾಂನಲ್ಲಿ ಮತ್ತೆ ಬಿಜೆಪಿ:** ಕಳೆದ ಎರಡು ಅವಧಿಯಿಂದ ಅಧಿಕಾರದಲ್ಲಿರುವ ಬಿಜೆಪಿ ಅಸ್ಸಾಂನಲ್ಲಿ ಮೂರನೇ ಬಾರಿಗೆ ಅಧಿಕಾರ ಹಿಡಯುವತ್ತ ಹೆಜ್ಜೆ ಹಾಕಿದೆ, 126 ವಿಧಾನಸಭಾ ಕ್ಷೇತ್ರಗಳ ಪೈಕಿ ಬಹುಮತಕ್ಕೆ ಅಗತ್ಯವಾಗಿರುವ 64 ಸ್ಥಾನಗಳನ್ನು ದಾಟಿ 100 ಕ್ಷೇತ್ರಗಳಲ್ಲಿ ಮುನ್ನಡೆ ಸಾಧಿಸುವ ಮೂಲಕ ಹ್ಯಾಟ್ರಿಕ್ ಜಯಭೇರಿ ಬಾರಿಸಿದೆ. ಕಾಂಗ್ರೆಸ್ ಅಧಿಕಾರ ಹಿಡಿಯಬೇಕು ಎನ್ನವು ಆಸೆ ನಿರಾಸೆಯಾಗಿದೆ. ಕೇವಲ 26 ಸ್ಥಾನಗಳಿಗಷ್ಟೇ ಶಕ್ತಿವಾಗಿದೆ, ಎಐಡಿಎಫ್ 2, ಮತ್ತು ಇತರರು ಒಂದು ಕ್ಷೇತ್ರದಲ್ಲಿ ಮುನ್ನಡೆ ಸಾಧಿಸಿದ್ದಾರೆ. ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ಮತ್ತೊಮ್ಮೆ ಈಶಾನ್ಯ ರಾಜ್ಯ ಅಸ್ಸಾಂನಲ್ಲಿ ಮೋಡಿ ಮಾಡಿದ್ದಾರೆ

**ಪುದುಚೆರಿಯಲ್ಲಿ ಎನ್‌ಡಿಎ:** ಪುದುಚೆರಿಯಲ್ಲಿ ಎನ್ ಡಿಎ ನೇತೃತ್ವದ ಮೈತ್ರಿಕೂಟ ಮತ್ತೊಮ್ಮೆ ಅಧಿಕಾರ ಹಿಡಿಯುವತ್ತ ಹೆಜ್ಜೆ ಇಟ್ಟಿದೆ, 30 ಕ್ಷೇತ್ರಗಳ ಪೈಕಿ ಆಡಳಿತಾರೂಢ ಎನ್ ಆರ್ ಸಿ 15 ಕ್ಷೇತ್ರಗಳಲ್ಲಿ ಮುನ್ನಡೆ ಸಾಧಿಸಿದ ಅಧಿಕಾರ ಹಿಡಿಯುವತ್ತ ಹೆಜ್ಜೆ ಇಟ್ಟಿದೆ, ಕಾಂಗ್ರೆಸ್ 11 ಮತ್ತು ಹಾಗೂ ಇತರರು ಮೂರು ಕ್ಷೇತ್ರಗಳಲ್ಲಿ ಮುನ್ನಡೆ ಸಾಧಿಸಿದ್ದಾರೆ.

## ಪಂಚ ರಾಜ್ಯಗಳ ಚುನಾವಣೆಯಲ್ಲಿ ಬಿಜೆಪಿ ದಿಗ್ವಿಜಯ ಸಾಧಿಸಿದೆ

ಪಂಚ ರಾಜ್ಯಗಳ ಚುನಾವಣೆ ಪೈಕಿ ಪಶ್ಚಿಮ ಬಂಗಾಳ, ಆಸ್ಸಾಂ ಮತ್ತು ಪುದುಚೇರಿ ರಾಜ್ಯಗಳ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ದಿಗ್ವಿಜಯ ಸಾಧಿಸಿದೆ. ಪ್ರಧಾನಿ ನರೇಂದ್ರ ಮೋದಿಯವರ ಜನಪರ ಕೆಲಸಗಳನ್ನು ಮತದಾರರು ಎತ್ತಿ ಹಿಡಿದಿದ್ದಾರೆ. ಚಾಣಕ್ಯ ಅಮಿತ್ ಷಾ ಅವರ ರಣತಂತ್ರ ಪಶ್ಚಿಮ ಬಂಗಾಳದಲ್ಲಿ ಕೈ ಹಿಡಿದಿದೆ. ದೇಶದ ಮೂಲೆ– ಮೂಲೆಗಳಲ್ಲಿ ಕಮಲ ಅರಳಿದೆ. ಪಕ್ಷದ ಸಮಸ್ತ ಕಾರ್ಯಕರ್ತರು ಮತ್ತು ಚುನಾವಣೆಯಲ್ಲಿ ಜಯ ಸಾಧಿಸಿರುವ ನಮ್ಮ ಪಕ್ಷದ ಎಲ್ಲ ಅಭ್ಯರ್ಥಿಗಳಿಗೆ ಅಭಿನಂದನೆಗಳು.

ಮುಂದಿನ 2028 ರಲ್ಲಿ ಕರ್ನಾಟಕದಲ್ಲಿ ನಡೆಯುವ ಸಾರ್ವತ್ರಿಕ ಚುನಾವಣೆಯಲ್ಲಿ ಬಿಜೆಪಿ ಸಂಪೂರ್ಣ ಬಹುಮತದಿಂದ ಅಧಿಕಾರಕ್ಕೆ ಬರಲಿದೆ.



**–ಬಾಲಚಂದ್ರ ಜಾರಕಿಹೊಳಿ**
**ಶಾಸಕರು, ಬೆಮುಲ್ ಅಧ್ಯಕ್ಷರು**

## ಬಾಗಲಕೋಟೆ ವಿಧಾನಸಭಾ ಉಪ ಚುನಾವಣೆ–2026

# ಕಾಂಗ್ರೇಸ್ ಅಭ್ಯರ್ಥಿ ಉಮೇಶ ಮೇಟಿಗೆ ಗೆಲವು



ಬಾಗಲಕೋಟೆ: ಬಾಗಲಕೋಟೆ ವಿಧಾನಸಭಾ ಉಪ ಚುನಾವಣೆ–2026ರ ಮತ ಎಣಿಕೆ ಕಾರ್ಯ ಸೋಮವಾರ ನಡೆದಿದ್ದು, ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಉಮೇಶ ಮೇಟಿ, ಅವರ ಪ್ರತಿ ಸ್ಪರ್ಧಿ ಭಾರತೀಯ ಜನತಾ ಪಕ್ಷದ ಅಭ್ಯರ್ಥಿ ವೀರಣ್ಣ ಚರಂತಿಮಠ ಅವರಿಗಿಂತ 22,332 ಮತಗಳ ಅಂತರದಿಂದ ಗೆಲುವು ಸಾಧಿಸಿದ್ದಾರೆ ಎಂದು ಚುನಾವಣಾಧಿಕಾರಿಗಳು ಆಗಿರುವ ಉಪ ವಿಭಾಗಾಧಿಕಾರಿ ಸಂತೋಷ ಜಗಲಾಸರ ತಿಳಿಸಿದ್ದಾರೆ.

ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಉಮೇಶ ಮೇಟಿ ಅವರು 98919 ಮತಗಳನ್ನು ಪಡೆದು ಗೆಲುವು ಸಾಧಿಸಿದರೆ, ಭಾರತೀಯ ಜನತಾ ಪಕ್ಷದ ಅಭ್ಯರ್ಥಿ ವೀರಣ್ಣ ಚರಂತಿಮಠ 76587 ಮತಗಳನ್ನು ಪಡೆದು ಪರಾಜಯ ಹೊಂದಿರುತ್ತಾರೆ.

ಅದೇ ರೀತಿ ಉತ್ತಮ ಪ್ರಜಾಕೀಯ ಪಾರ್ಟಿಯ ಅಂತೋಷ ಸವ್ವಾಸೆ 512 ಮತಗಳನ್ನು ಪಡೆದರೆ, ಬ್ಲೂ ಇಂಡಿಯಾ ಪಾರ್ಟಿಯ ತಳವಾರ ಶಿವಕುಮಾರ 112, ಜನತಾ ಚಳವಳಿ ಭಾರತ ಪಕ್ಷದ ತೋಜೋರಾಮಶೆಟ್ಟಿ ದೇವಾಂಗ 62, ಕರ್ನಾಟಕ ರಕ್ಷಾ ಸಮಿತಿಯ ನಾಗರಾಜ ಕಲಕುಟಗರ 154, ಆಲ್ ಇಂಡಿಯಾ ಜನರಕ್ಷಾ ಪಾರ್ಟಿಯ ಸಿದ್ದಪ್ಪ ಗೋಡಿ 131, ಪಕ್ಷೇತರ ಅಭ್ಯಥಿಗಳಾದ ಆನಂದ ಜಕಾತಿ 198, ರವಿ ಶಿವಪ್ಪ ಪಡಸಲಗಿ 389 ಮತಗಳನ್ನು ಪಡೆದುಕೊಂಡಿದ್ದಾರೆ.

ಬಾಗಲಕೋಟೆ ಉಪ ಚುನಾವಣೆ ಮತಕ್ಷೇತ್ರಕ್ಕೆ ಸಂಬಂಧಿಸಿದಂತೆ ಒಟ್ಟು 260182 ಮತಗಳು ಇದ್ದು, ಈ ಪೈಕಿ 177073 ಮತಗಳು ಚಲಾವಣೆಗೊಂಡಿದ್ದು, ಅದರಲ್ಲಿ 1458 ಮತಗಳು ನೋಟಾ ಮತಗಳು ಇರುತ್ತವೆ. 100 ಮತಗಳು ತಿರಸ್ಕೃತಗೊಂಡಿವೆ ಎಂದು ಚುನಾವಣಾಧಿಕಾರಿಗಳು ತಿಳಿಸಿದ್ದಾರೆ. ಗೆಲವು ಸಾಧಿಸಿದ ಕಾಂಗ್ರೆಸ್ ಪಕ್ಷದ ಉಮೇಶ ಮೇಟಿ ಅವರಿಗೆ ಚುನಾವಣಾಧಿಕಾರಿ ಸಂತೋಷ ಜಗಲಾಸರ ಪ್ರಮಾಣ ಪತ್ರ ವಿತರಣೆ ಮಾಡಿದರು.

ಪ್ರಮಾಣ ಪತ್ರ ವಿತರಣೆಯಲ್ಲಿ ಸಂದರ್ಭದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ, ಉಪ ಚುನಾವಣೆಯ ಸಾಮಾನ್ಯ ವೀಕ್ಷಕರಾದ ಪಾರುಲ್ ಪಟವಾರಿ, ಜಿಲ್ಲಾಧಿಕಾರಿ ಸಂಗಪ್ಪ, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಸೇರಿದಂತೆ ಜಿಲ್ಲೆಯ ವಿವಿಧ ಶಾಸಕರು ಉಪಸ್ಥಿತರಿದ್ದರು.



## ವಿಜಯೋತ್ಸವ

ಚೆನ್ನೈ: ತಮಿಳುನಾಡು ವಿಧಾನಸಭಾ ಚುನಾವಣೆಯಲ್ಲಿ ದ್ರಾವಿಡ ಪಕ್ಷಗಳನ್ನು ಹಿಂದಿಕ್ಕಿ ನಟ ವಿಜಯ್ ನೇತೃತ್ವದ ಟಿವಿಕೆ ಪಕ್ಷ ವಿಜಯದ ಪತಾಕೆ ಹಾರಿಸಿದ್ದು, ನಟ ವಿಜಯ್ ರಾಜಕೀಯ ರಂಗದಲ್ಲೂ ಯಶಸ್ಸು ಸಾಧಿಸಿದ್ದಾರೆ. ಇದೇ ಮೊದಲ ಬಾರಿಗೆ ತಮಿಳುನಾಡು ಇತಿಹಾಸದಲ್ಲಿ ದ್ರಾವಿಡ ಹಾಗೂ ಕಾಂಗ್ರೆಸ್‌ನ್ನು ಹೊರತು ಪಡಿಸಿ ಮೂರನೇ ರಾಜಕೀಯ ಶಕ್ತಿ ಉದಯಿಸಿದೆ. ನಟ ವಿಜಯ್ ತಮಿಳು ನಾಡಿನ ಹೊಸ 'ಜನ ನಾಯಕ'ರಾಗಿ ಹೊರಹೊಮ್ಮಿದ್ದಾರೆ.

ತಮಿಳುನಾಡಿನಲ್ಲಿ ಆಡಳಿತ ವಿರೋಧಿ ಹಾಗೂ ನಟ ವಿಜಯ್ ಅವರ ಜನಪ್ರಿಯತೆಯ ಅಲೆಯಲ್ಲಿ ಆಡಳಿತಾರೂಢ ಡಿಎಂಕೆ ಕೊಚ್ಚಿಹೋಗಿ ಚುನಾವಣೆಯಲ್ಲಿ ನೆಲಕಚ್ಚಿದೆ.

ತಮಿಳುನಾಡಿನಲ್ಲಿ ಆಡಳಿತಾರೂಢ ಡಿಎಂಕೆ ಪಕ್ಷ ಮತ್ತೆ ಅಧಿಕಾರ ಹಿಡಿಯುತ್ತೇವೆ ಎಂಬ ಮತಗಟ್ಟೆ ಸಮೀಕ್ಷೆಗಳು ಹುಸಿಯಾಗಿದ್ದು ಡಿಎಂಕೆಗೆ ತೀವ್ರ ಮುಖಭಂಗವಾಗಿದ್ದು ಚುನಾ ವಣೆಯಲ್ಲಿ ಹೀನಾಯ ಸೋಲಿಗೆ ಒಳಗಾ ಗಿದೆ. ತಮಿಳುನಾಡಿನಲ್ಲಿ ಬಿಜೆಪಿ ಜೊತೆ ಮೈತ್ರಿ ಮಾಡಿಕೊಂಡು ಮತ್ತೆ ಅಧಿಕಾರ ಹಿಡಿಯುವ ಎಐಎಡಿಎಂಕೆ ಕನಸಿಗೆ ವಿಜ ಯ್ ಅಡ್ಡಗಾಲು ಹಾಕಿದ್ದು ಎಐಎಡಿಎಂಕೆ ಸಹ ಅಧಿಕಾರ ಹಿಡಿಯುವಲ್ಲಿ ವಿಫಲವಾಗಿದೆ.

### ಟಿವಿಕೆ ಪ್ರತಿಕ್ರಿಯೆ

ತಮಿಳುನಾಡು ವಿಧಾನಸಭಾ ಚುನಾವಣೆಯ ಗೆಲುವಿನ ಬಗ್ಗೆ ಪ್ರತಿಕ್ರಿಯಿಸಿರುವ ನಟ ವಿಜಯ್‌ರವರ ಟಿವಿಕೆ ಪಕ್ಷದ ನಾಯಕ ಫೆಲಿಕ್ಸ್ ಜೆರಾಲ್ಡ್ ತಮಿಳುನಾಡಿನಲ್ಲಿ ಟಿವಿಕೆ ಪಕ್ಷ ಸರ್ಕಾರ ರಚಿಸಲಿದೆ ಎಂದಿದ್ದಾರೆ.

ಟಿವಿಕೆ ಈಗ ಹೆಚ್ಚಿನ ಸ್ಥಾನ ಗೆದ್ದಿದೆ. ತಮಿಳುನಾಡಿನಲ್ಲಿ ಜನ ಬದಲಾವಣೆ ಬಯಿಸಿದ್ದಾರೆ. ವಿಜಯ್ ತಮಿಳುನಾಡಿನ ಮುಖ್ಯಮಂತ್ರಿಯಾಗಲಿದ್ದಾರೆ ಎಂದು ಅವರು ಹೇಳಿದ್ದಾರೆ.

### ವಿದ್ಯಾರ್ಥಿನಿಯರು ಮೊಬೈಲ್ ವ್ಯಾಮೋಹ ಬಿಟ್ಟು ಉನ್ನತ ಶಿಕ್ಷಣದತ್ತ ಗಮನಹರಿಸಿ

## ಮುದ್ದೇಬಿಹಾಳದಲ್ಲಿ 6.50 ಕೋಟಿ ವೆಚ್ಚದ ಡಾ. ಬಿ.ಆರ್. ಅಂಬೇಡ್ಕರ್ ಮೆಟ್ರಿಕ್ ನಂತರದ ಬಾಲಕಿಯರ ವಸತಿ ನಿಲಯದ ಉದ್ಘಾಟನೆ: ಶಾಸಕ ನಾಡಗೌಡ



**ಬೆಳಗಾವಿ ವಾರ್ತೆ ಮುದ್ದೇಬಿಹಾಳ:** ದಿನಗಳಲ್ಲಿ ಮಕ್ಕಳು ಮೊಬೈಲ್ ವ್ಯಾಮೋಹಕ್ಕೆ ಒಳಗಾಗುತ್ತಿರುವುದನ್ನು ತಪ್ಪಿಸಲು ಹಾಗೂ ಅವರಿಗೆ ಉತ್ತಮ ಶೈಕ್ಷಣಿಕ ವಾತಾವರಣ ಕಲ್ಪಿಸಲು ವಸತಿ ನಿಲಯಗಳ ಅವಶ್ಯಕತೆ ಹೆಚ್ಚಿದೆ. ಪಾಲಕರ ಬೇಡಿಕೆಯಂತೆ ವಿದ್ಯಾರ್ಥಿನಿಯರ ಅನುಕೂಲಕ್ಕಾಗಿ ಈ ನೂತನ ಕಟ್ಟಡವನ್ನು ಉದ್ಘಾಟಿಸಲಾಗಿದೆ ಎಂದು ಕೆಎಸ್‌ಡಿಸಿ ನಿಗಮದ ಅಧ್ಯಕ್ಷ ಹಾಗೂ ಶಾಸಕ ಸಿ.ಎಸ್. ನಾಡಗೌಡ ಅವರು ಹೇಳಿದರು.

ಪಟ್ಟಣದ ಮಾರುತಿ ನಗರದಲ್ಲಿ ಶುಕ್ರವಾರ ಜಿಲ್ಲಾ ಪಂಚಾಯತ್ ಹಾಗೂ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ನಿರ್ಮಿಸಲಾದ ಡಾ. ಬಿ.ಆರ್. ಅಂಬೇಡ್ಕರ್ ಮೆಟ್ರಿಕ್ ನಂತರದ ಬಾಲಕಿಯರ ಸರ್ಕಾರಿ ನೂತನ ವಸತಿ ನಿಲಯವನ್ನು ಉದ್ಘಾಟಿಸಿ ಅವರು ಮಾತನಾಡಿದರು.

**ಸರ್ಕಾರಿ ಶಾಲೆಗಳ ಮೇಲೆ ವಿಶ್ವಾಸವಿರಲಿ**

"ಖಾಸಗಿ ಶಾಲೆಗಳು ಕೇವಲ ಭವ್ಯ ಕಟ್ಟಡಗಳಿಂದ ಪಾಲಕರನ್ನು ಆಕರ್ಷಿಸುತ್ತವೆ. ಆದರೆ ಸರ್ಕಾರಿ ಶಾಲೆಗಳಲ್ಲಿ ಅನುಭವವಿರುವ ಶ್ರೇಷ್ಠ ಶಿಕ್ಷಕರಿದ್ದಾರೆ. ಇಂದು ಸರ್ಕಾರಿ ವಸತಿ ನಿಲಯ ಹಾಗೂ ಶಾಲೆಗಳಲ್ಲಿ ಓದಿದ ಬಡ ವಿದ್ಯಾರ್ಥಿಗಳು ಐಎಎಸ್ (IAS), ಕೆಎಎಸ್ (KAS) ನಂತಹ ಉನ್ನತ ಹುದ್ದೆಗಳನ್ನು ಅಲಂಕರಿಸಿದ್ದಾರೆ. ಖಾಸಗಿ ಶಾಲೆಗಳಿಗಿಂತಲೂ ಹೆಚ್ಚಿನ ಡಿಜಿಟಲ್ ಸೌಲಭ್ಯಗಳು ಇಂದು ಸರ್ಕಾರಿ ಶಾಲೆಗಳಲ್ಲಿ ಲಭ್ಯವಿವೆ. ಹೀಗಾಗಿ ಪಾಲಕರು ತಮ್ಮ ಮಕ್ಕಳನ್ನು ಹಿಂಜರಿಕೆಯಿಲ್ಲದೆ ಸರ್ಕಾರಿ ಶಾಲೆಗಳಿಗೆ ಸೇರಿಸಬೇಕು, ಎಂದು ಕರೆ ನೀಡಿದರು.

**6.50 ಕೋಟಿ ವೆಚ್ಚದ ಸುಸಜ್ಜಿತ ಕಟ್ಟಡ: ವಸತಿ ನಿಲಯಕ್ಕೆ ಮಿನಿ ಬಸ್ ಭರವಸೆ**

"ಸರ್ಕಾರವು ಸುಮಾರು 6.50 ಕೋಟಿ ರೂಪಾಯಿ ವೆಚ್ಚದಲ್ಲಿ ಈ ಸುಂದರ ಕಟ್ಟಡವನ್ನು ನಿರ್ಮಿಸಿಕೊಟ್ಟಿದೆ. ವಿದ್ಯಾರ್ಥಿನಿಯರು ತಮ್ಮ ಮನೆಯನ್ನು ಎಷ್ಟು ಸ್ವಚ್ಛವಾಗಿಟ್ಟುಕೊಳ್ಳುತ್ತಾರೋ, ಅದೇ ರೀತಿ ಈ ವಸತಿ ನಿಲಯವನ್ನು ಕೂಡ ಸ್ವಚ್ಛವಾಗಿಟ್ಟುಕೊಳ್ಳಬೇಕು. ವಿದ್ಯಾರ್ಥಿನಿಯರ ಸಂಚಾರದ ಅನುಕೂಲಕ್ಕಾಗಿ ಶೀಘ್ರದಲ್ಲೇ ಒಂದು ಮಿನಿ ಬಸ್ ವ್ಯವಸ್ಥೆ ಮಾಡಲಾಗುವುದು. ಅಲ್ಲದೆ, ಇದೇ ವರ್ಷದಲ್ಲಿ ಪ್ರೀ–ಮೆಟ್ರಿಕ್ ವಸತಿ ನಿಲಯ ಮಂಜೂರು ಮಾಡಿಸಲು ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು," ಎಂದು ಭರವಸೆ ನೀಡಿದರು.

**ಅಧಿಕಾರಿಗಳಿಗೆ ಶಾಸಕರ ಖಡಕ್ ಸೂಚನೆ**

ಕಾಮಗಾರಿಯನ್ನು ಪರಿಶೀಲಿಸಿದ ಶಾಸಕರು, "ವಸತಿ ನಿಲಯದ ಕಟ್ಟಡವು ತಳಮಟ್ಟದಿಂದ ಸರಿಯಾದ ಎತ್ತರದಲ್ಲಿರಬೇಕು. ಇಲ್ಲದಿದ್ದರೆ ಭವಿಷ್ಯದಲ್ಲಿ ಸುತ್ತಮುತ್ತ ಮನೆಗಳು ನಿರ್ಮಾಣವಾದಾಗ ಮಳೆ ನೀರು ನಿಂತು ಕಟ್ಟಡದ ಆಯಸ್ಸು ಕಡಿಮೆಯಾಗುತ್ತದೆ. ಅಲ್ಲದೆ, ಬಾಲಕಿಯರ ಸುರಕ್ಷತೆಯ ದೃಷ್ಟಿಯಿಂದ ಕಾಂಪೌಂಡ್ ಅತಿ ಎತ್ತರವಾಗಿ ಹಾಗೂ ಅತ್ಯಂತ ಗುಣಮಟ್ಟದಿಂದ ಕೂಡಿರಬೇಕು, ಎಂದು ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

**ಅಧಿಕಾರಿಗಳ ವಿವರಣೆ**

ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕಿ ಬಸಂತಿ ಮಠ ಮಾತನಾಡಿ, "2013 ರಿಂದ ಬಾಡಿಗೆ ಕಟ್ಟಡದಲ್ಲಿದ್ದ ಈ ನಿಲಯಕ್ಕೆ ಶಾಸಕರ ಸತತ ಪ್ರಯತ್ನದಿಂದಾಗಿ ಈಗ ಸ್ವಂತ ಕಟ್ಟಡ ಲಭಿಸಿದೆ. ಇಲ್ಲಿ ಕಂಪ್ಯೂಟರ್ ಸೇರಿದಂತೆ ಎಲ್ಲಾ ಸೌಲಭ್ಯಗಳಿದ್ದು, ಬಾಲಕಿಯರ ಸುರಕ್ಷತೆಗೆ ಆದ್ಯತೆ ನೀಡಲಾಗಿದೆ ಎಂದರು.

ಇದೇ ವೇಳೆ ಹಳೆಯದಾಗಿರುವ ಮೆಟ್ರಿಕ್ ಪೂರ್ವ ವಸತಿ ನಿಲಯಕ್ಕೂ ಹೊಸ ಕಟ್ಟಡ ನಿರ್ಮಿಸಿಕೊಡಲು ಮನವಿ ಮಾಡಿದರು.

ಲೋಕೋಪಯೋಗಿ ಇಲಾಖೆಯ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರಾದ ಎ.ಬಿ. ರೆಡ್ಡಿ ಪ್ರಾಸ್ತಾವಿಕವಾಗಿ ಮಾತನಾಡಿ, "2023 ರಲ್ಲಿ ಚಾಲನೆ ನೀಡಲಾದ ಈ ಕಾಮಗಾರಿಯಲ್ಲಿ 100 ವಿದ್ಯಾರ್ಥಿನಿಯರ ಸಾಮರ್ಥ್ಯದ 18 ಸುಸಜ್ಜಿತ ಕೊಠಡಿಗಳು ಹಾಗೂ ಸಿಸಿ ರಸ್ತೆ ನಿರ್ಮಿಸಲಾಗಿದೆ," ಎಂದು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ತಾ.ಪಂ ಇಒ ಸಂಗನಗೌಡ ಬಿರಾದಾರ, ಮಾಜಿ ಪುರಸಭೆ ಅಧ್ಯಕ್ಷ ಮೈಹಿಬೂಬ ಗೊಳಸಂಗಿ, ಜಿಪಿಸಿ ಪ್ರಮುಖರಾದ ಆನಂದಗೌಡ ಬಿರಾದಾರ, ಸತೀಶ್ ಓಸ್ವಾಲ್, ವಿರೇಶ ಹಡಲಗೇರಿ, ಶ್ರೀಕಾಂತ್ ಚಲವಾದಿ,ಸಿಕಂದರ್ ಜಾನ್ವೇಕಾರ, ಗುತ್ತಿಗೆದಾರ ಅರುಣ ಎಸ್. ಮಠ, ಇಂಜಿನಿಯರ್ ಸುನಿಲ್ ನಾಯಕ, ಮುತುರಾಜ ಹಡಲಗೇರಿ, ಹಾಗೂ ಸಮಾಜ ಕಲ್ಯಾಣ ಇಲಾಖೆಯ ವಸತಿ ನಿಲಯ ವಾರ್ಡನ್ ಗಳು ಮತ್ತು ಸಿಬ್ಬಂದಿಗಳು,ವಿದ್ಯಾರ್ಥಿನಿಯರು ಸೇರಿದಂತೆ ಉಪಸ್ಥಿತರಿದ್ದರು.

> "ಮೆಟ್ರಿಕ್ ನಂತರ ಬಾಲಕಿಯರ ವಸತಿ ನಿಲಯದ ಕಟ್ಟಡವು ತಳಮಟ್ಟದಿಂದ ಸರಿಯಾದ ಎತ್ತರದಲ್ಲಿರಬೇಕು. ಭವಿಷ್ಯದಲ್ಲಿ ಸುತ್ತಮುತ್ತಲಿನ ಮನೆಗಳ ನಿರ್ಮಾಣವಾದಾಗ ಮಳೆ ನೀರು ನಿಂತು ಕಟ್ಟಡದ ಆಯಸ್ಸು ಕಡಿಮೆಯಾಗಬಾರದು. ಬಾಲಕಿಯರ ಸುರಕ್ಷತೆಯ ದೃಷ್ಟಿಯಿಂದ ಕಾಂಪೌಂಡ್ ಅತಿ ಎತ್ತರವಾಗಿ ಮತ್ತು ಅತ್ಯಂತ ಗುಣಮಟ್ಟದಿಂದ ಕೂಡಿರಬೇಕು ಎಂದು ಲೋಕೋಪಯೋಗಿ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದ್ದೇನೆ."
>
> **ಸಿ.ಎಸ್. ನಾಡಗೌಡ**
> **ಶಾಸಕರು ಹಾಗೂ ಕೆಎಸ್‌ಡಿ ನಿಗಮದ ಅಧ್ಯಕ್ಷರು.**

## ಅಭಿವೃದ್ಧಿ ಮೂಲಕ ಗ್ರಾಮೀಣ ರಸ್ತೆಗಳಿಗೆ ಹೊಸ ಮೆರಗು: ಸಚಿವ ಪಾಟೀಲ



**ಬೆಳಗಾವಿ ವಾರ್ತೆ ವಿಜಯಪುರ :** ಅಭಿವೃದ್ಧಿಯ ಮೂಲಕ ಗ್ರಾಮೀಣ ಭಾಗದ ರಸ್ತೆಗಳಿಗೆ ಹೊಸ ಮೆರಗು ನೀಡಲಾಗುತ್ತಿದೆ ಎಂದು ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಹೇಳಿದ್ದಾರೆ.

ರವಿವಾರ ಬಬಲೇಶ್ವರ ತಾಲೂಕಿನ ಯಕ್ಕುಂಡಿಯಲ್ಲಿ ಲೋಕೋಪಯೋಗಿ ಇಲಾಖೆ ವತಿಯಿಂದ ರೂ. 300 ಲಕ್ಷ ವೆಚ್ಚದಲ್ಲಿ ರಾಷ್ಟ್ರೀಯ ಹೆದ್ದಾರಿ ಸಂಖ್ಯೆ 34ರ ಯಕ್ಕುಂಡಿ, ಸಂಗಾಪುರ, ಶೇಗುಣಸಿ, ಕಾಖಂಡಕಿ ವ್ಹಾಯಾ ಹರಳಯ್ಯನಗುಂಡ 0 ಕಿ. ಮೀ. ಯಿಂದ 3 ಕಿ. ಮೀ ವರೆಗೆ ರಸ್ತೆ ಸುಧಾರಣೆ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು.

ಈ ಭಾಗದ ಜನತೆಯ ಬಹುದಿನಗಳ ನಿರೀಕ್ಷೆಯಾಗಿದ್ದ ರಾಷ್ಟ್ರೀಯ ಹೆದ್ದಾರಿ 34ರಿಂದ ಹರಳಯ್ಯನಗುಂಡ ರಸ್ತೆಯವರೆಗೆ ಈ ಕಾಮಗಾರಿ ನಡೆಯಲಿದೆ. ಇದರಿಂದ ಯಕ್ಕುಂಡಿ, ಸಂಗಾಪುರ, ಶೇಗುಣಸಿ ಹಾಗೂ ಕಾಖಂಡಕಿ ಜನರಿಗೆ ಹಾಗೂ ಸುಕ್ಷೇತ್ರ ಹರಳಯ್ಯನಗುಂಡಕ್ಕೆ ಆಗಮಿಸುವ ಭಕ್ತರಿಗೆ ಅನುಕೂಲವಾಗಲಿದೆ. ಅಷ್ಟೇ ಅಲ್ಲ, ಈ ಕಾಮಗಾರಿ ಪೂರ್ಣಗೊಂಡ ನಂತರ ರೈತರು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರಿಗೆ ರಸ್ತೆ ಸಂಚಾರ ಮತ್ತಷ್ಟು ಸುಲಭವಾಗಲಿದೆ ಎಂದು ಅವರು ತಿಳಿಸಿದರು.

ಬಬಲೇಶ್ವರ ಮತಕ್ಷೇತ್ರದಲ್ಲಿ ಕೆರೆ ತುಂಬಿಸುವ ಯೋಜನೆಗೆ ಪೂರಕವಾಗಿ ಈಗ ಹಳ್ಳಗಳನ್ನು ತುಂಬಿಸುವ ಯೋಜನೆ ಕೈಗೆತ್ತಿಕೊಳ್ಳಲಾಗಿದೆ. ಮತಕ್ಷೇತ್ರದಲ್ಲಿ, ನೀರಾವರಿಗೆ ಪೂರಕವಾಗಿ ಗುಣಮಟ್ಟದ ವಿದ್ಯುತ್ ಪೂರೈಕೆಗೆ ಒತ್ತು ನೀಡಲಾಗಿದೆ. ಶೈಕ್ಷಣಿಗ ಗುಣಮಟ್ಟ ಸುಧಾರಣೆ, ರಸ್ತೆಗಳ ಅಭಿವೃದ್ಧಿ, ಹೈನುಗಾರಿಕೆಯಲ್ಲಿ ಸ್ವಾವಲಂಬನೆ ಸಾಧಿಸಲು ನಾನಾ ಯೋಜನೆಗಳಿವೆ ಚಾಲನೆ ನೀಡಲಾಗಿದೆ. ರೈತರು ಖುಷಿಯಾಗಿದ್ದರೆ ನಾಡು ಸಮೃದ್ಧಿಯಿಂದ ಕೂಡಿರುತ್ತದೆ ಎಂಬ ತತ್ವದಡಿ ಕಾಯಕ ನಿರತರಾಗಿರುವುದಾಗಿ ಸಚಿವ ಎಂ. ಬಿ. ಪಾಟೀಲ ಹೇಳಿದರು.

ಮುಖಂಡ ಚನ್ನಪ್ಪ ಕೊಪ್ಪದ ಮಾತನಾಡಿ, ರಸ್ತೆ ಸುಧಾರಣೆ ಕಾಮಗಾರಿಗೆ ಚಾಲನೆ ನೀಡಿದ್ದರಿಂದ ಈ ಭಾಗದ ಜನರು ಸುತ್ತುಬಳಸಿ ಬೇರೆ ಮಾರ್ಗಗಳ ಮೂಲ ಸಂಚಿರಿಸುವುದು ತಪ್ಪಲಿದೆ. ಸಮಯ ಉಳಿತಾಯದ ಜೊತೆ ವಾಹನಗಳ ತೈಲ ವೆಚ್ಚವೂ ಕಡಿಮೆಯಾಗಲಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಯಕ್ಕುಂಡಿಯ ವೀರೇಶ್ವರ ಶರಣರು, ಮುಖಂಡರಾದ ವಿ. ಎಸ್. ಪಾಟೀಲ, ಮಲ್ಲು ದಳವಾಯಿ, ರಮೇಶ ದೇಸಾಯಿ, ಬಾಬುಗೌಡ ಪಾಟೀಲ, ನಾಗರಾಜ ಕುಲಕರ್ಣಿ, ಪ್ರಭುಗೌಡ ಪಾಟೀಲ, ಶೇಖಪ್ಪ ಕೊಪ್ಪದ, ಮಲ್ಲಪ್ಪ ಕೆಂಪವಾಡ, ಮಹೇಶ ಮಾಳಿ, ರಫೀಕ್ ಸೋನಾರ, ಜಾಫರ್ ನಿಡೋಣಿ, ವಿದ್ಯಾ ರಾಣಿ ತುಂಗಳ, ದಾನಮ್ಮ ಜಿರಲಿ, ಕಾವ್ಯ ಪಡತಾರೆ, ರಂಗಪ್ಪ ಪೂಜಾರಿ, ಮಾದೇವಪ್ಪ ಮಂಡೆಗಾರ, ಬುಡ್ಡಸಾಬ್ ಜಮಾದಾರ, ಇಸಾಕಸಾಬ್ ಜಮಾದಾರ, ಮುತ್ತಪ್ಪ ಪೂಜಾರಿ, ರಾಜಸಾಬ ಜಮಾದಾರ, ಪರಶುರಾಮ ಪಡಗಾರ, ರಾಜೇಸಾಬ್ಬ ಗಲಗಲಿ, ಅಬ್ಬಾ ಸಲಿ ಕಮತೆ, ಸವಿತಾ ವಗ್ಗರ, ಸುರೇಶ ಪೂಜಾರಿ, ರಮೇಶ ತಂಬಾಕೆ ಸೇರಿದಂತೆ ಗ್ರಾಮದ ಹಿರಿಯರು, ಯುವಕರು ಉಪಸ್ಥಿತರಿದ್ದರು.

## "ಜುಮನಾಳದಲ್ಲಿ ಸರ್ವಧರ್ಮೀಯರಿಂದ ಬುದ್ಧ, ಬಸವ, ಅಂಬೇಡ್ಕರ್ ದಿನಾಚರಣೆ ಆಚರಣೆ."





**ಬೆಳಗಾವಿ ವಾರ್ತೆ ವಿಜಯಪುರ:** ನಿಜಕ್ಕೂ ಇದೊಂದು ಅನುಕರಣೀಯ ಕಾರ್ಯಕ್ರಮ ಊರ ನಟ್ಟನಡುವೆ ಬುದ್ಧ, ಬಸವ ಅಂಬೇಡ್ಕರರ ಭಾವಚಿತ್ರಗಳನ್ನು ಇರಿಸಿ ಬುದ್ಧನ ಕುರಿತು ಡಾ// ಸುಜಾತಾ ಚಂಚಲಕರ್, ಬಸವಣ್ಣನ ಕುರಿತು ಚಿಗರಳ್ಳಿಯ ಸಿದ್ದ ಬಸವ ಕಬೀರ ಮಹಾಸ್ವಾಮಿಗಳಿಂದ ಉಪನ್ಯಾಸ

ಅಂಬೇಡ್ಕರರ ಕುರಿತು ಹಾಗೂ ಸಂವಿಧಾನದ ಮೂಲಭೂತ ಸೌಲಭ್ಯಗಳ ಕುರಿತು ಸರ್ವಧರ್ಮೀಯರಿಗೆ ಅಂಬೇಡ್ಕರರ ಕಾಣಿಕೆ ಏನೆಂಬುದನ್ನು ಅತ್ಯಂತ ಮಾರ್ಮಿಕವಾಗಿ ಕುರಿತು ಮಾತನಾಡಿದ ಸಾಮಾಜಿಕ ಚಿಂತಕ ಪ್ರೊ; ಬಸವ ರಾಜ್.... ನಿಮ್ಮ ಮಕ್ಕಳಿಗೆ ಧಾರ್ಮಿಕತೆಯನ್ನು ಕಲಿಸಬೇಡಿ ಅಥವಾ ಬೋಧಿಸಬೇಡಿ ಅವರು ಮೂಢನಂಬಿಕೆಯ ಗುಲಾಮರಾಗು ತ್ತಾರೆ ಅವರಿಗೆ ಶಿಕ್ಷಣ ಕೊಡಿ ಗುಲಾಮ ಗಿರಿಯನ್ನು ಮೆಟ್ಟಿ ನಿಲ್ಲುತ್ತಾರೆ ಎಂಬು ದು ಅಂಬೇಡ್ಕರರ ಆಶಯವಾಗಿತ್ತು ಎಂದರು. ಅಜ್ಞಾನ ನಿಮ್ಮಲ್ಲಿ ಭಯವನ್ನುಂಟು ಮಾಡಿದರೆ ಭಯ ನಿಮ್ಮಲ್ಲಿ ಅಜ್ಞಾನ ವನ್ನು ಉಂಟು ಮಾಡುತ್ತದೆ ಎರಡನ್ನೂ ಓಡಿಸುವ ಏಕೈಕ ಅಸ್ತ್ರ ಶಿಕ್ಷಣ ವಿದ್ಯಾವಂತರಾಗಿ ಸಂಘಟಿತರಾಗಿ ಹೋರಾಟ ಮಾಡಿ ನನ್ನ ದೇಶದ ನನ್ನ ದೇಶದ ಜನ ದೇವ ಸ್ಥಾನಗಳಿಗೆ ಸಾಲುಗಟ್ಟಿ ನಿಲ್ಲುವುದಕ್ಕಿಂತ ಗ್ರಂಥಾಲಯಗಳಿಗೆ ಸಾಲುಗಟ್ಟಿ ಎಂದು ನಿಲ್ಲುತ್ತಾರೆಯೋ ಅಂದೇ ನಮ್ಮ ದೇಶ ಪ್ರಗತಿಗೆ ಮುಖ ಮಾಡಿದೆ ಎಂಬುದು ಅಂಬೇಡ್ಕರರ ಸಂವಿಧಾನದ ಮೂಲ ಆಶಯ ದೇಶದ ಪ್ರತಿ ಗ್ರಾಮಗಳಲ್ಲೂ ಕೂಡ ಈ ರೀತಿಯ ಸರ್ವಧರ್ಮೀಯರ ಸೇರಿಕೊಂಡು ತ್ರಿವಳಿ ರತ್ನಗಳ ಜಯ ಂತಿ ಆಚರಿಸಬೇಕು ಅಂದಾಗ ಸಂವಿ ಧಾನ ಮತ್ತು ಪ್ರಜಾಪ್ರಭುತ್ವದ ಆಶಯ ಗಳು ಜಾರಿಗೆ ಬರುತ್ತವೆ ಎಂದು ಹೇಳಿದರು.

ಏಷ್ಯಾದ ಬೆಳಕು ಬುದ್ಧ, ಮಹಾ ಮಾನವತವಾದಿ ಬಸವಣ್ಣ, ವಿಶ್ವ ರತ್ನ ಡಾ// ಬಾಬಾ ಸಾಹೇಬ್ ಅಂಬೇಡ್ಕರ್, ಭಾರತದ ತ್ರಿವಳಿ ರತ್ನಗಳಾದ ಈ ಮೂವರು ಮಹನೀಯರ ಜಯಂತಿ ಅಂಗವಾಗಿ ಮಹಾ ಶರಣರ ಮೆರವಣಿಗೆ ನಡೆಯಿತು, ಮೆರವಣಿಗೆಯುದ್ಧಕ್ಕೂ ಮಕ್ಕಳು ಸಂವಿಧಾನ ಜಯ ಘೋಷಣೆಗಳನ್ನು ಕೂಗುತ್ತಾ ಅತಿ ವಿಜೃಂಭಣೆಯಿಂದ ಮೆರವಣಿಗೆಯನ್ನು ಪೂರ್ಣಗೊಳಿಸಿದರು,

ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ವಹಿಸಿದಂತಹ ಸಿದ್ದ ಬಸವ ಕಬೀರ ಮಹಾಸ್ವಾಮಿಗಳು ಬಸವಣ್ಣನ ಆಶಯಗಳಂತೆ ಸಮಾಜ ಮುನ್ನಡೆಯಲಿ ಎಂದರು, ಡಾ, ಸುಜಾತ ಚಂಚಲ ಕರ್ ಇವರು ಗೌತಮ್ ಬುದ್ಧರ ಬಗ್ಗೆ ಜೀವನ ಚರಿತ್ರೆಯ ಕುರಿತು ಮುಂದೆ ಕುಳಿತ ವಿದ್ಯಾರ್ಥಿಗಳ ಗಮನಕ್ಕೆ ತಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಾನ್ಯ ಶಾಸಕರಾದಂತ ವಿಠ್ಠಲ ಕಟಕದೊಂಡ ವಹಿಸಿಕೊಂಡಿದ್ದರು ಮುಖ್ಯ ಅತಿಥಿಗಳಾಗಿ ಸುಜಾತಾ ಸೋಮನಾಥ ಕಳ್ಳಿಮನಿ ಜಿಲ್ಲಾ ಪಂಚಾಯತ್ ಮಾಜಿ ಅಧ್ಯಕ್ಷರು ಇವರ ಉಪಸ್ಥಿತಿ ವಹಿಸಿದ್ದರು, ಹಾಗೆ ಕಾರ್ಯಕ್ರಮದಲ್ಲಿ ಹೈ ಸ್ಕೂಲ್ ನಲ್ಲಿ ಅತಿ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳಿಗೆ ಸನ್ಮಾನ ಸಮಾರಂಭವು ಕೂಡ ಏರ್ಪಟ್ಟಿತು

ಈ ಸಂಪೂರ್ಣ ಕಾರ್ಯಕ್ರಮದ ಯಶಸ್ವಿಗಳ ಯಶಸ್ವಿಯಾಗಿ ಪೂರ್ಣಗೊಳಿಸಿದ ತಂಡದ ಸದಸ್ಯರಾದಂತಹ ಎಲ್ಲಪ್ಪ ತಳೇವಾಡ, ಸುಭಾಷ್ ಚಲವಾದಿ, ಅಜ್ಮೀರ್ ಸನಾಬಾದ್ ಹಾಗೂ ಇನ್ನಿತರರು ಹಾಜರಿದ್ದರು. ಕಾರ್ಯಕ್ರಮದ ಮಧ್ಯ ಭಾಗದಲ್ಲಿ ಖ್ಯಾತ ಭಜನಾ ಗಾಯಕ ಆಕಾಶ ಮನಗೂಳಿ ಹಾಗೂ ತಂಡದ ವರಿಂದ ಮತ್ತು ಕ್ರಾಂತಿಕಾರಿ ಜೈ ಭೀಮ್ ಗೀತಗಳಿಗೆ ಜಿಲ್ಲೆಯಲ್ಲಿ ಹೆಸರು ಮಾಡಿದ ರಾಜೇಶ್ ಚೆಲವಾದಿ ಅವರಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

## 185ನೇ ದಿನದಲ್ಲಿ ಬಲ್ಡೋಟ ಹಟಾವೋ ಕೊಪ್ಪಳ ಬಚಾವೋ ಧರಣಿ




**ಬೆಳಗಾವಿ ವಾರ್ತೆ ಕೊಪ್ಪಳ :** ನಗರಸಭೆ ಆವರಣದಲ್ಲಿ ಜಿಲ್ಲಾ ಬಚಾವೋ ಆಂದೋಲನ ಸಮಿತಿ ಹಾಗೂ ಪರಿಸರ ಹಿತರಕ್ಷಣಾ ವೇದಿಕೆ ನಡೆಸುತ್ತಿರುವ ಬಲ್ಡೋಟ ತೊಲಗಲಿ ಕೊಪ್ಪಳ ಉಳಿಯಲಿ ಹೋರಾಟ 185ನೇ ದಿನ ಪೂರೈಸಿತು.

ಹಿರೇಬಗನಾಳ, ಅಲ್ಲಾನಗರ ಸುತ್ತಲಿನ ಮಾಲಿನ್ಯಕಾರಿ ಸ್ಪಾಂಜ್ ಐರನ್ ಕಾರ್ಖಾನೆಗಳನ್ನು ಕೇಂದ್ರ ಪರಿಸರ ಇಲಾಖೆಯ ಶಿಫಾರಸ್ಸಿನಂತೆ ನಿರ್ಜನ ಪ್ರದೇಶಕ್ಕೆ ಸ್ಥಳಾಂತರ ಮಾಡಬೇಕು, ಹೈಕೋರ್ಟ್ ಪ್ರಕರಣ ರಿ.ಪಿ. ನಂ: 5713/ 2009ರ ಆದೇಶದಂತೆ ಬಲ್ಡೋಟ ಅತಿಕ್ರಮಿಸಿರುವ ಬಸಾಪುರ ಕೆರೆಯನ್ನು ಜಾನುವಾರು ನೀರು ಕುಡಿಯಲು ಮುಕ್ತಗೊಳಿಸಬೇಕು, ಕೊಪ್ಪಳ ಅರ್ಧ ಭಾಗ ಮಾಲಿನ್ಯ ಮಾಡಿದ ಬಲ್ಡೋಟ ಎಂಎಸ್ಪಿಎಲ್ ಪೆಲ್ಲೆಟ್ ಘಟಕವನ್ನು ಮುಚ್ಚಿ ನಗರ ಜನರ ಆರೋಗ್ಯ ಕಾಪಾಡಬೇಕು. ಕಾರ್ಖಾನೆ ಧೂಳು ಬಾಧಿತ 22 ಹಳ್ಳಿಗಳ ಪುನರುಜ್ಜೀವನಕ್ಕಾಗಿ ವಿಶೇಷ ಪ್ಯಾಕೇಜ್ ಘೋಷಣೆ ಮಾಡಬೇಕು, ಎಐಐಎಂಎಸ್ ಸಂಸ್ಥೆಯಿಂದ ಆರೋಗ್ಯ ಸಮೀಕ್ಷೆ ಮಾಡಬೇಕು, ಐಐಎಸ್ಸಿ ಸಂಸ್ಥೆಯಿಂದ ಬಾಧಿತ ಪ್ರದೇಶ ಮತ್ತು ತುಂಗಭದ್ರಾ ನೀರಿನ ಮಾಲಿನ್ಯದ ಸಮೀಕ್ಷೆ ಮಾಡಬೇಕು ಎಂದು ಆಗ್ರಹಿಸಿ ಧರಣಿ ನಡೆಸಲಾಗುತ್ತಿದೆ.

200ನೇ ದಿನದ ಧರಣಿಯನ್ನು ವಿಶೇಷವಾಗಿ ನಡೆಸಲು ವೇದಿಕೆ ತೀರ್ಮಾನಿಸಿದೆ. ಆ ದಿನದ ಹೋರಾಟ ಬೆಂಬಲಿಸಲು ಆರ್ಥಿಕ ತಜ್ಞ, ನಿವೃತ್ತ ಹಂಪಿ ವಿ.ವಿ. ಪ್ರಾಧ್ಯಾಪಕ ಟಿ. ಆರ್. ಚಂದ್ರಶೇಖರ ಅವರನ್ನು ಆಹ್ವಾನಿಸಲಾಗಿದೆ.

ಅವರು ಕಾರ್ಖಾನೆ ಮಾಲಿನ್ಯದಿಂದ ಸಂತ್ರಸ್ತರಾದ ಬಾಧಿತ ಹಳ್ಳಿಗಳ ಜನರನ್ನು ಭೇಟಿ ಮಾಡಿ, ಅವರ ಸಮಸ್ಯೆ ಆಲಿಸಿಕೊಂಡು ಬಂದು ಹೋರಾಟದ ವೇದಿಕೆಯಲ್ಲಿ ಮಾತನಾಡುತ್ತಾರೆ ಎಂದು ವೇದಿಕೆಯ ಸಂಘಟಕರು ಹೇಳಿದ್ದಾರೆ.

ಧರಣಿಯಲ್ಲಿ ಜಂಟಿ ಕ್ರಿಯಾ ವೇದಿಕೆ ಪ್ರಧಾನ ಸಂಚಾಲಕ ಅಲ್ಲಮಪ್ರಭು ಬೆಟ್ಟದೂರು, ಸಂಚಾಲಕ ಮಲ್ಲಿಕಾರ್ಜುನ ಬಿ. ಗೋನಾಳ, ನಿವೃತ್ತ ಅಂಚೆ ಅಧಿಕಾರಿ ರವಿ ಕಾಂತನವರ, ನಿವೃತ್ತ ಪ್ರಾಚಾರ್ಯ ಬಿ.ಜಿ.ಕರಿಗಾರ, ರಾಜಶೇಖರ ಏಳುಬಾವಿ, ಮಹಾದೇವಪ್ಪ ಮಾವಿನಮಡು, ಶಿವಪ್ಪ ಹಲಗೇರಿ, ನಾಗರಾಜ ಕುಷ್ಟಗಿ, ವಿಜಯಮಹಾಂತೇಶ ಹಟ್ಟಿ, ಕೆ.ಮಂಜುನಾಥ ಗಂಗಾವತಿ, ಗಂಗಮ್ಮ ಕುರುಗೋಡು, ರಾಮಲಿಗಯ್ಯ ಶಾಸ್ತ್ರಿ, ದುರುಗಪ್ಪ ಕನಕಮನಿ, ಭೀಮಪ್ಪ ಯಲಬುರ್ಗಾ ಭಾಗವಹಿಸಿದ್ದರು.

## ಯಲಬುರ್ಗಾ ಪಟ್ಟಣದಲ್ಲಿ ಹಾರ್ಡ್ವೆರಗೆ ಆಕಸ್ಮಿಕ ಅಗ್ನಿ ಅವಘಡ : ಲಕ್ಷಾಂತರ ರೂ. ನಷ್ಟ



**ಬೆಳಗಾವಿ ವಾರ್ತೆ ಯಲಬುರ್ಗಾ :** ಪಟ್ಟಣದಲ್ಲಿ ರವಿವಾರ ಮಧ್ಯಾಹ್ನ 1 ಗಂಟೆಗೆ ಹೊಂಬಳ ವಕೀಲರ ಕಾಂಪ್ಲೆಕ್ಸ್ ನಲ್ಲಿ ಚಿನ್ನಪ್ಪ ಬಡಿಗೇರ ಇವರು ಹಾರ್ಡ್ವೆರಗೆ ಆಕಸ್ಮಕ ಬೆಂಕಿ ಕಾಣಿಸಿಕೊಂಡಿದ್ದು ಅಂಗಡಿಯಲ್ಲಿದ್ದ ಅಪಾರ ಪ್ರಮಾಣದ ಪೈಪು, ಪೇಂಟು ಅನೇಕ ಸಾಮಗ್ರಿಗಳನ್ನು ಬೆಂಕಿಗೆ ಆಹುತಿಯಾಗಿವೆ.

ಬೆಂಕಿ ಹತ್ತಿರುವದು ಕಾರಣ ತಿಳಿದು ಬಂದಿಲ್ಲ, ವಿದ್ಯುತ್ ಶ್ಯಾರ್ಟ್ ಸರ್ಕ್ಯೂಟ್ ಆಗಿರಬಹುದು ಎಂದು ಹೇಳಲಾಗುತ್ತಿದೆ, ಆದರೆ ನಿಖರ ಮಾಹಿತಿ ತಿಳಿದು ಬಂದಿಲ್ಲ, ಬೆಂಕಿ ಹೊತ್ತಿದ ತಕ್ಷಣವೇ ಸ್ಥಳೀಯ ಅಗ್ನಿ ಶಾಮಕದವರು ಆಗಮಿಸಿ ಬೆಂಕಿ ನಂದಿಸುವಲ್ಲಿ ಯಶಸ್ವಿಯಾಗಿದ್ದಾರೆ. ಇದರಿಂದ ಮುಂದೆ ನಡೆಯುವ ದೊಡ್ಡ ಅನಾಹುತವನ್ನು ತಪ್ಪಿಸಿದ್ದಾರೆ.

# ನಿರಂತರ ಪ್ರಯತ್ನ, ಕಠಿಣ ಪರಿಶ್ರಮದಿಂದ ಗುರಿ ತಲುಪುವುದು ಸುಲಭ



**ಬೆಳಗಾವಿ ವಾರ್ತೆ ಅಥಣಿ:** ಮಕ್ಕಳು ಬೇಸಿಗೆ ರಜಾ ದಿನಗಳನ್ನು ವ್ಯರ್ಥ ಮಾಡದೆ, ಸೃಜನಾತ್ಮಕ ಹಾಗೂ ಕ್ರಿಯಾತ್ಮಕ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಬೇಕು. ಬೇಸಿಗೆ ಶಿಬಿರಗಳು ಮಕ್ಕಳಲ್ಲಿ ಪ್ರತಿಭೆ ಬೆಳೆಸಲು ಮಹತ್ವದ ಪಾತ್ರ ವಹಿಸುತ್ತವೆ. ಅವರಲ್ಲಿ ಆತ್ಮವಿಶ್ವಾಸ, ನಾಯಕತ್ವ ಸಾಮರ್ಥ್ಯ ಬೆಳೆಸುತ್ತವೆ. ಆಧುನಿಕ ತಂತ್ರಜ್ಞಾನದ ಯುಗದಲ್ಲಿ ಮಕ್ಕಳಲ್ಲಿ ಸೃಜನಶೀಲತೆ ಬೆಳೆಸಲು ಬೇಸಿಗೆ ಶಿಬಿರಗಳು ಪ್ರಯೋಜನಕಾರಿಯಾಗಿವೆ ಎಂದು ಎಂದು ಅಥಣಿ ವಲಯದ ಡಿವೈ ಎಸ್ಪಿ ಪ್ರಶಾಂತ್ ಮುನ್ನೊಳ್ಳಿ ಹೇಳಿದರು.

ಅವರು ಎಸ್.ಎಸ್.ಎಂ.ಎಸ್ ಮಹಾವಿದ್ಯಾಲಯದ ಖೋತ ಸಭಾಂಗಣದಲ್ಲಿ ಚಂಡಕಿ ಜನಕಲ್ಯಾಣ ಶಿಕ್ಷಣ ಸಂಘ ಹಾಗೂ ಮಹೇಶ್ ಇಂಗ್ಲಿಷ್ ಅಕಾಡೆಮಿ ವತಿಯಿಂದ ಆಯೋಜಿಸಲಾಗಿದ್ದ ಬೇಸಿಗೆ ಶಿಬಿರದ ಉದ್ಘಾಟನೆ ಮತ್ತು ಎಸ್‌ಎಸ್‌ಎಲ್‌ಸಿ ರಾಜ್ಯಮಟ್ಟದ ಟಾಪರ್ ಕು. ಪ್ರಾರ್ಥನಾ ನಾಗಪ್ಪ ಬಿರಾದಾರ ಪಾಟೀಲ ಅವರ ಅಭಿನಂದನಾ ಸಮಾರಂಭದ ಮುಖ್ಯ ಅತಿಥಿಯಾಗಿ ಮಾತನಾಡುತ್ತಿದ್ದರು. ಸಾಧನೆಗೆ ಬಡತನ ವಾಗಲಿ ಅಥವಾ ಭೌತಿಕ ಅಡೆತಡೆಗಳಾಗಲಿ ಎಂದಿಗೂ ಅಡ್ಡಿಯಾಗುವುದಿಲ್ಲ. ನಿರಂತರ ಪ್ರಯತ್ನ ಮತ್ತು ಕಠಿಣ ಪರಿಶ್ರಮವಿದ್ದರೆ ಗುರಿ ತಲುಪುವುದು ಸುಲಭ ಎಂಬುದನ್ನು ಕಟಗೇರಿ ಸರ್ಕಾರಿ ಶಾಲೆಯ ವಿದ್ಯಾರ್ಥಿನಿ ಪ್ರಾರ್ಥನಾ ಸಾಬೀತುಪಡಿಸಿದ್ದಾಳೆ. ಅವಳ ಈ ಸಾಧನೆ ಇತರ ಗ್ರಾಮೀಣ ಪ್ರತಿಭೆಗಳಿಗೆ ದಾರಿದೀಪವಾಗಿದೆ. ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದ ಏಳು ವಿದ್ಯಾರ್ಥಿಗಳಲ್ಲಿ ಅಥಣಿ ತಾಲೂಕಿನ ಸರ್ಕಾರಿ ಶಾಲೆಯ ವಿದ್ಯಾರ್ಥಿನಿ ಸೇರಿರುವುದು ಇಡೀ ತಾಲೂಕಿಗೆ ಹೆಮ್ಮೆಯ ವಿಷಯ ಎಂದರು.

ಬೇಸಿಗೆಯಲ್ಲಿ ಬಿಸಿಲಿನ ತಾಪ ಹೆಚ್ಚಾಗಿರುವ ಕಾರಣ, ಪೋಷಕರು ಮಕ್ಕಳನ್ನು ಬೇಸಿಗೆ ಶಿಬಿರಕ್ಕೆ ಕಳುಹಿಸುವ ಮೂಲಕ ಅವರ ಆರೋಗ್ಯ ಸುಧಾರಣೆ ಮಾಡಬೇಕು. ಜೊತೆಗೆ, ಅವರು ಪಠ್ಯೇತರ ಚಟುವಟಿಕೆಗಳಲ್ಲಿ ಹೆಚ್ಚು ತೊಡಗಿಕೊಳ್ಳುವಂತೆ ಗಮನಹರಿಸಬೇಕು. ಬೇಸಿಗೆ ಶಿಬಿರಗಳನ್ನು ಮಕ್ಕಳಿಗೆ ಸದುಪಯೋಗವಾಗಬೇಕು ಎಂದು ಡಿವೈಎಸ್ಪಿ ಪ್ರಶಾಂತ್ ಮುನ್ನೊಳ್ಳಿ ಹೇಳಿದರು.

ಅತಿಥಿ ಉಪನ್ಯಾಸಕರಾಗಿ ಆಗಮಿಸಿದ್ದ ಡಾ. ವೈ. ವೈ. ಕೊಕ್ಕನವರ ಮಾತನಾಡಿ, ಕೇವಲ ಅಂಕಗಳಿಕೆಯ ಶಿಕ್ಷಣಕ್ಕಿಂತ, ಸಮಾಜದಲ್ಲಿ ಗೌರವದಿಂದ ಬದುಕುವ ಮತ್ತು ದೇಶಕ್ಕೆ ಕೊಡುಗೆ ನೀಡುವ ಸಂಸ್ಕಾರಯುತ ಶಿಕ್ಷಣ ಇಂದಿನ ಅಗತ್ಯವಾಗಿದೆ ಎಂದು ಅಭಿಪ್ರಾಯಪಟ್ಟರು.

ಸನ್ಮಾನ ಸ್ವೀಕರಿಸಿ ಕು. ಪ್ರಾರ್ಥನಾ ಬಿರಾದಾರ ಪಾಟೀಲ ಮಾತನಾಡಿ ನಾನು ಹಗಲು-ರಾತ್ರಿ ನಿದ್ದೆಗೆಟ್ಟು ಓದಿಲ್ಲ. ಬದಲಾಗಿ ತರಗತಿಯಲ್ಲಿ ಶಿಕ್ಷಕರು ಹೇಳಿಕೊಡುವ ಪಾಠವನ್ನು ಏಕಾಗ್ರತೆಯಿಂದ ಆಲಿಸುತ್ತಿದ್ದೆ. ಮಹೇಶ್ ಅಕಾಡೆಮಿಯ ಬೇಸಿಗೆ ಶಿಬಿರದಲ್ಲಿ ಪಾಲ್ಗೊಂಡಾಗ ರಾಜ್ಯಕ್ಕೆ ಟಾಪರ್ ಆಗಬೇಕೆಂಬ ಕನಸು ಕಂಡಿದ್ದೆ, ಇಂದು ಅದು ನನಸಾಗಿರುವುದು ಸಂತಸ ತಂದಿದೆ," ಎಂದು ತನ್ನ ಯಶಸ್ಸಿನ ಹಾದಿಯನ್ನು ಹಂಚಿಕೊಂಡರು.

ಕಾರ್ಯಕ್ರಮದಲ್ಲಿ ತೇರದಾಳ ವಿಜ್ಞಾನ ಪಿಯು ಕಾಲೇಜಿನ ಪ್ರಾಚಾರ್ಯ ಶಿವಾನಂದ ಮಗದುಮ್ಮ, ಪ್ರಾಧ್ಯಾಪಕ ಶಂಕರ ಕಮತಗಿ, ಮುಖ್ಯೋಪಾಧ್ಯಾಯ ತುಕಾರಾಮ ಬಾಗೇನ್ನವರ, ಕನ್ನಡಪರ ಹೋರಾಟಗಾರ ಶಬ್ಬೀರ್ ಸಾತಬಚ್ಚೆ, ಪತ್ರಕರ್ತರ ಸಂಘದ ಅಧ್ಯಕ್ಷ ರಾಕೇಶ್ ಮೈಗೂರ, ಮಹೇಶ್ ಚಂಡಕಿ, ಶಿಕ್ಷಣ ಪ್ರೇಮಿ ವಿಠ್ಠಲ ಚಂಡಕಿ. ಶಿವಾನಂದ ಪಾಟೀಲ, ನಾಗಪ್ಪ ಬಿರಾದರ ಪಾಟೀಲ, ಅಮಿತ ಪುಕಾಳೆ, ರಮೇಶ ಇಂಗಳೆ, ಕೆಂಚಪ್ಪ ಚಂಡಕಿ, ಶಶಿಧರ ಬರ್ಲಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ದತ್ತಿ ಉಪನ್ಯಾಸ



**ಬೆಳಗಾವಿ ವಾರ್ತೆ ಲಕ್ಷ್ಮೇಶ್ವರ:** "ಕನ್ನಡ ಕೇವಲ ಒಂದು ಭಾಷೆಯಲ್ಲ. ಅದೊಂದು ಅಸ್ಮಿತೆ. ಎರಡು ಸಾವಿರ ವರ್ಷಗಳ ಇತಿಹಾಸ ಹೊಂದಿರುವ ಕನ್ನಡದ ಹಿರಿಮೆಯನ್ನು ಮುಂದಿನ ಪೀಳಿಗೆಗೆ ಉಳಿಸಿ ಬೆಳೆಸುವ ಕಾರ್ಯ ಪ್ರತಿಯೊಬ್ಬ ಕನ್ನಡಿಗರಿಂದಲೂ ಆಗಬೇಕು" ಎಂದು ಖ್ಯಾತ ವೈದ್ಯ ಡಾ.ಪಿ.ಡಿ.ತೋಟದ ಅಭಿಪ್ರಾಯಪಟ್ಟರು. ಅವರು ಲಕ್ಷೆ ??ೀಶ್ವರ ತಾಲೂಕ ಕನ್ನಡ ಸಾಹಿತ್ಯ ಪರಿಷತ್ತು ಲಕ್ಷ್ಮೇಶ್ವರದ ದಿ ಯೂನಿಕ್ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಹಮ್ಮಿಕೊಂಡ ದತ್ತಿ ಉಪನ್ಯಾಸಗಳನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.

ಗಣ್ಯ ವ್ಯಾಪಾರಸ್ಥರಾದ ಶಿವಣ್ಣ ಕೋಳಿವಾಡ ಇವರು ಕೊಡ ಮಾಡಿದ ದತ್ತಿ "ಕನ್ನಡ ಭಾಷೆ-ಕನ್ನಡಿಗರ ಅಸ್ಮಿತೆ" ವಿಷಯದ ಕುರಿತು ಮಾತನಾಡಿದ ಉಪನ್ಯಾಸಕ ರವಿ ನೀರಲಗಿ "ಕನ್ನಡ ಭಾಷೆಯು ಕನ್ನಡಿಗರ ಪಾಲಿಗೆ ಕೇವಲ ಸಂವಹನ ಮಾಧ್ಯಮವಲ್ಲ, ಅದು ನಮ್ಮ ಸಂಸ್ಕೃತಿ, ಇತಿಹಾಸ ಮತ್ತು ಅಸ್ಮಿತೆಯ ತಳಹದಿಯಾಗಿದೆ. ಸುದೀರ್ಘ,ಶ್ರೀಮಂತ ಇತಿಹಾಸವನ್ನು ಹೊಂದಿರುವ ಕನ್ನಡ ಭಾಷೆಯು ಕನ್ನಡಿಗರನ್ನು ಭಾವನಾತ್ಮಕವಾಗಿ ಒಂದುಗೂಡಿಸುವ ಮಹತ್ವದ ಶಕ್ತಿಯಾಗಿದೆ"ಎಂದರು.

ಡಾ.ಪಿ.ಡಿ.ತೋಟದ ಕೊಡ ಮಾಡಿದ ದತ್ತಿ "ಜಾನಪದ- ಜಾಣರ ಪದ" ವಿಷಯದ ಕುರಿತು ಮಾತನಾಡಿದ ಶಿಕ್ಷಕ ಸಾಹಿತಿ ಆರ್.ಎಸ್.ಪಾಟೀಲ "ನಮ್ಮ ಆಚಾರ-ವಿಚಾರ, ಹಬ್ಬ-ಹರಿದಿನ, ಮತ್ತು ಮಾನವೀಯ ಸಂಬಂಧಗಳ ಮಹತ್ವವನ್ನು ಈ ಜಾನಪದ ಸಾಹಿತ್ಯ ಕಲಿಸುತ್ತದೆ. ಮೌಕಿಕ ಪರಂಪರೆಯಾದ ಇದು ಸಮಾಜವನ್ನು ಮುನ್ನಡೆಸುವ "ಜಾಣ" ಮಾರ್ಗವಾಗಿದೆ" ಎಂದರು. ಮುಖ್ಯಅತಿಥಿಯಾಗಿ ಭಾಗವಹಿಸಿ ಮಾತನಾಡಿದ ಯೂನಿಕ್ ಶಾಲೆಯ ಮುಖ್ಯೋಪಾಧ್ಯಾಯ ಅರವಿಂದ ದೇಶಪಾಂಡೆ "ವ್ಯವಹಾರಿಕ ಭಾಷೆ ಇಂಗ್ಲಿಷ್ ಇದ್ದರೂ ಅಂತರಂಗದ ಭಾಷೆಯಾಗಿ ಕನ್ನಡ ಬೇಕೇ ಬೇಕು"ಎಂದರು. ಇನ್ನೋರ್ವ ಮುಖ್ಯ ಅತಿಥಿ ಕು.ಚೇತನಾ ಕೋಳಿವಾಡ "ಸಮಕಾಲೀನ ಸ್ಪರ್ಧಾತ್ಮಕ ಜಗತ್ತಿನಲ್ಲಿ ನಾವು ಅದಷ್ಟೇ ಮುಂದುವರೆದಿದ್ದರೂ ಕನ್ನಡ ಭಾಷೆ ನಮ್ಮ ಅಸ್ತಿತ್ವವನ್ನು ಪ್ರತಿನಿಧಿಸುತ್ತದೆ" ಎಂದರು. ಲಕ್ಷ್ಮೇಶ್ವರ ತಾಲೂಕ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಈಶ್ವರ ಮೆಡ್ಲೇರಿ ಪ್ರಾಸ್ತಾವಿಕವಾಗಿ ಮಾತನಾಡಿ ತಾಲೂಕ ಘಟಕ ನಡೆದು ಬಂದ ಹಾದಿ ಹಾಗೂ ಮುಂದಿನ ಯೋಜನೆಗಳನ್ನು ವಿವರಿಸಿದರು. ಸಾಹಿತಿ ಸುರೇಶ ತಂಗೋಡ ಜನಪದ ಸಾಹಿತ್ಯದ ಕುರಿತು ಮಾತನಾಡಿದರು. ದತ್ತಿಧಾನಿಗಳು ಹಾಗೂ ಉಪನ್ಯಾಸಕರನ್ನು ಸನ್ಮಾನಿಸಲಾಯಿತು. ನಾಗರಾಜ್ ಮಜ್ಜಿಗುಡ್ಡ ಈರಣ್ಣ ಗಾಣಿಗೇರ ಎಸ್ ಬಿ ಅಣ್ಣಿಗೇರಿ ವೀರಣ್ಣ ಅಕ್ಕೂರ ನಿರ್ವಹಿಸಿದರು. ಶಿಕ್ಷಕರಾದ ಶಶಿಕಾಂತ ಕುಂಬಾರ, ಸಿ.ಎಫ್.ಪಾಟೀಲ,ಎಲ್.ಆರ್.ಮಲಸಮುದ್ರ, ಪ್ರವೀಣ ಕುಂಬಾರ ಮುಂತಾದವರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ರಸ್ತೆಗಳ ಸುಧಾರಣೆಗೆ ಗ್ರಾಮಸ್ಥರ ಸಹಕಾರಕ್ಕೆ ಸಚಿವ ಪಾಟೀಲ ಮನವಿ

**ಬೆಳಗಾವಿ ವಾರ್ತೆ ವಿಜಯಪುರ:** ರಸ್ತೆಗಳ ಸುಧಾರಣೆಗೆ ಗ್ರಾಮಸ್ಥರು ಸಹಕರಿಸಬೇಕು ಎಂದು ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಹೇಳಿದ್ದಾರೆ.

ರವಿವಾರ ಬಬಲೇಶ್ವರ ತಾಲೂಕಿನ ದೇವರ ಗೆಣ್ಣೂರ ಬಳಿ ಲೋಕೋಪಯೋಗಿ ಇಲಾಖೆ ವತಿಯಿಂದ ರೂ. 400 ಲಕ್ಷ ವೆಚ್ಚದಲ್ಲಿ ಕಂಬಾಗಿ- ದೇವರ ಗೆಣ್ಣೂರ ಜಿಲ್ಲಾ ಮುಖ್ಯ ರಸ್ತೆ ಸುಧಾರಣೆ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಅವರು ಮಾತನಾಡಿದರು.

ಈ ಭಾಗದಲ್ಲಿ ಕಬ್ಬು ಸಾಗಣೆ ವಾಹನಗಳ ಓಡಾಟ ಹೆಚ್ಚಳದಿಂದ ರಸ್ತೆಗಳು ಬೇಗ ದುರಸ್ಥಿಗೆ ಬರುತ್ತಿವೆ. ರಸ್ತೆಗಳ ಅತೀಕ್ರಮಣ ತೆರವು ಮಾಡಿ ವಾಹನಗಳ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಬೇಕು. ರಸ್ತೆ ಕಾಮಗಾರಿ ಪ್ರಾರಂಭಕ್ಕೂ ಮುನ್ನ ರೈತರು ತಮ್ಮ ತೋಟಗಳಿಗೆ ಪೈಪು ಮತ್ತೀತರ ಮೂಲಭೂತ ಸೌಕರ್ಯ ಕೆಲಸಗಳನ್ನು ಪೂರ್ಣಗೊಳಿಸಬೇಕು. ನಂತರ ಯಾವುದೇ ಕಾರಣಕ್ಕೂ ರಸ್ತೆ ಅಗೆಯಬಾರದು ಎಂದು ಸಚಿವ ಎಂ. ಬಿ. ಪಾಟೀಲ ಹೇಳಿದರು.

ನಿವೃತ್ತ ಶಿಕ್ಷಕ ವಿ. ವಿ. ಅರಕೇರಿ ಮಾತನಾಡಿ, ಎಂ. ಬಿ. ಪಾಟೀಲರು ಜಲಸಂಪನ್ಮೂಲ ಸಚಿವರಾಗಿದ್ದಾಗ ನೀರಾವರಿಯಷ್ಟೇ ಅಲ್ಲ, ಸಮುದಾಯ ಭವನ, ದೇವಸ್ಥಾನಗಳನ್ನು ಅಭಿವೃದ್ಧಿ ಪಡಿಸಿದ್ದಾರೆ. ಈಗ ರಸ್ತೆಗಳ ಅಭಿವೃದ್ಧಿಗೆ ಕ್ರಮ ಕೈಗೊಂಡಿದ್ದಾರೆ ಎಂದು ಹೇಳಿದರು.



# ಮುದ್ದೇಬಿಹಾಳದಲ್ಲಿ ಶಾಸಕ ಸಿ.ಎಸ್. ನಾಡಗೌಡರಿಂದ "ಚಾಂಪಿಯನ್ ಟ್ರೋಫಿ-2026" ಕ್ರಿಕೆಟ್ ಪಂದ್ಯಾವಳಿ ಅದ್ದೂರಿ ಉದ್ಘಾಟನೆ



**ಬೆಳಗಾವಿ ವಾರ್ತೆ ಮುದ್ದೇಬಿಹಾಳ:** ಕ್ರೀಡೆಗಳು ದೈಹಿಕ ಮತ್ತು ಮಾನಸಿಕ ಆರೋಗ್ಯವನ್ನು ವೃದ್ಧಿಸುವುದಲ್ಲದೆ, ಯುವಜನರಲ್ಲಿ ಸಂಘಟನಾ ಶಕ್ತಿ ಮತ್ತು ಕ್ರೀಡಾ ಮನೋಭಾವವನ್ನು ಬೆಳೆಸುತ್ತವೆ ಎಂದು ಶಾಸಕ ಹಾಗೂ ಕರ್ನಾಟಕ ಸಾಬೂನು ಮತ್ತು ಮಾರ್ಜಕಗಳ ನಿಗಮದ (KSDL) ಅಧ್ಯಕ್ಷರಾದ ಸಿ.ಎಸ್. ನಾಡಗೌಡ (ಅಪ್ಪಾಜಿ ಧಣಿ) ಅವರು ಹೇಳಿದರು.

ಪಟ್ಟಣದ ವಿಬಿಸಿ ಹೈಸ್ಕೂಲ್ ಮೈದಾನದಲ್ಲಿ ಹಮ್ಮಿಕೊಂಡಿದ್ದ 'ಚಾಂಪಿಯನ್ ಟ್ರೋಫಿ-2026' ಹಾರ್ಡ್ ಟೆನ್ನಿಸ್ ಬಾಲ್ ಓಪನ್ ಕ್ರಿಕೆಟ್ ಟೋರ್ನಾಮೆಂಟ್‌ನ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

**ಪರಿಸರ ಪ್ರೇಮ ಮತ್ತು ಕ್ರೀಡಾ ಸ್ಫೂರ್ತಿಯ ಅನಾವರಣ**

ಶಾಸಕ ಸಿ.ಎಸ್. ನಾಡಗೌಡ ಅವರು ವೇದಿಕೆಯ ಮೇಲಿದ್ದ ಗಣ್ಯರೊಂದಿಗೆ ಸಸಿಗಳಿಗೆ ನೀರು ಹಾಕುವ ಮೂಲಕ ಕಾರ್ಯಕ್ರಮವನ್ನು ಅತ್ಯಂತ ಅರ್ಥಪೂರ್ಣವಾಗಿ ಉದ್ಘಾಟಿಸಿದರು. ನಂತರ, ಕ್ರೀಡಾಂಗಣಕ್ಕಿಳಿದ ಶಾಸಕರು, ಖುದ್ದಾಗಿ ಬ್ಯಾಟ್ ಬೀಸುವ ಮೂಲಕ ಕ್ರೀಡಾಪಟುಗಳಲ್ಲಿ ಹುಮ್ಮಸ್ಸು ತುಂಬಿದರು. ಕ್ರಿಕೆಟ್ ಆಟಗಾರರೊಂದಿಗೆ ಬೆರೆತು, ಕೆಲ ಕಾಲ ಆಟವಾಡುವ ಮೂಲಕ ಕ್ರೀಡಾ ಸ್ಫೂರ್ತಿಯನ್ನು ಅನಾವರಣಗೊಳಿಸಿದರು.

ಈ ಸಂದರ್ಭದಲ್ಲಿ ಅಸ್ಕಿ ಫೌಂಡೇಶನ್ ಅಧ್ಯಕ್ಷ ಹಾಗೂ ಕಾಂಗ್ರೆಸ್ ಮುಖಂಡ ಸಿ.ಬಿ. ಅಸ್ಕಿ, ಅಹಿಲ್ಯಾ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಮಲ್ಲಿಕಾರ್ಜುನ ಮದರಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಗುರು ತಾರನಾಳ, ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಕಾಮರಾಜಗೌಡ ಬಿರಾದಾರ, ಮಾಜಿ ಪುರಸಭೆ ಅಧ್ಯಕ್ಷ ಮಹಿಬೂಬ್ ಗೊಳಸಂಗಿ, ಪಂಚಮಶಾಲಿ ಸಮುದಾಯದ ಅಧ್ಯಕ್ಷ ಅಮರೇಶ್ ಗೋಳಿ, ಕೆಎಸ್‌ಯುಐ (NSUI) ರಾಜ್ಯ ಪ್ರಧಾನ ಕಾರ್ಯದರ್ಶಿ ಸದ್ದಾಂ ಕುಂಟೋಜಿ, ಸರ್ಕಾರಿ ಆಸ್ಪತ್ರೆಯ ನಾಮನಿರ್ದೇಶಿತ ಸದಸ್ಯ ರಫೀಕ್ ಶಿರೋಳ, ಕಾಂಗ್ರೆಸ್ ಮುಖಂಡರಾದ ಹುಸೇನ್ ಮುಲ್ಲಾ, ಉದ್ಯಮಿ ಸಿಕಂದರ್ ಜಾನ್ವೇಕರ, ಕರ್ನಾಟಕ ಕೋ-ಆಪ್ ಬ್ಯಾಂಕ್ ಉಪಾಧ್ಯಕ್ಷ ಶ್ರೀಕಾಂತ್ ಚಲವಾದಿ, ಪಂಚ ಗ್ಯಾರೆಂಟಿ ಸಮಿತಿ ಸದಸ್ಯ ಸಂಗಪ್ಪ ಮೇಲಿನಮನಿ, ಮಾಜಿ ಗ್ರಾ.ಪಂ. ಅಧ್ಯಕ್ಷ ಜಾವೀದ್ ಇನಾಂದಾರ್, ಮುಖಂಡ ಬಾಬು ಹುಣಚಗಿ ಹಾಗೂ ಚಾಂಪಿಯನ್ ಕ್ರಿಕೆಟ್ ಟೋರ್ನಾಮೆಂಟ್ ಅಧ್ಯಕ್ಷ ರಂಜಾನ್ ನದಾಫ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

# ಜಂಗಮ ಸಮಾಜಕ್ಕೆ ತಪ್ಪು ತಿದ್ದುವ ಅಧಿಕಾರವಿದೆ; ಒಳಪಂಗಡಗಳು ಮರೆತು ವೀರಶೈವ ಸಮಾಜ ಒಂದಾಗಲಿ: ಶಾಸಕ ಸಿ.ಎಸ್. ನಾಡಗೌಡ

**ಬೆಳಗಾವಿ ವಾರ್ತೆ ಮುದ್ದೇಬಿಹಾಳ:** ವೀರಶೈವ ಲಿಂಗಾಯತ ಸಮಾಜದಲ್ಲಿನ ಒಳಪಂಗಡ ಗಳು ಉಪಜಾತಿಗಳನ್ನು ಬರೆಯುವ ಮೂಲಕ ಒಡೆದು ಹೋಗುತ್ತಿವೆ. ನಾವೆಲ್ಲರೂ ಒಂದಾಗಿ ಸೇರಿ ಬಲಿಷ್ಠ ವೀರಶೈವ ಸಮಾಜವನ್ನು ಕಟ್ಟುವ ಅವಶ್ಯಕತೆ ಇದೆ," ಎಂದು ಕರ್ನಾಟಕ ರಾಜ್ಯ ಸೋಪು ಮತ್ತು ಮಾರ್ಜಕಗಳ ನಿಗಮದ (ಏಖಆಐ) ಅಧ್ಯಕ್ಷರು ಹಾಗೂ ಶಾಸಕರಾದ ಸಿ.ಎಸ್. ನಾಡಗೌಡ (ಅಪ್ಪಾಜಿ) ಅವರು ಹೇಳಿದರು.

ಪಟ್ಟಣದಲ್ಲಿ ಶುಕ್ರವಾರ 20 ಲಕ್ಷ ರೂಪಾಯಿ ವೆಚ್ಚದಲ್ಲಿ ನಿರ್ಮಾಣವಾಗಲಿರುವ ಜಗದ್ಗುರು ಶ್ರೀ ರೇಣುಕಾಚಾರ್ಯ ಸಮುದಾಯ ಭವನದ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಅವರು ಮಾತನಾಡಿದರು.

**ಜಂಗಮ ಸಮಾಜದ ಜವಾಬ್ದಾರಿ ಹಿರಿದು**

"ಜಂಗಮ ಎಂದರೆ ಶಿವನ ರೂಪ ಎಂದು ಭಾವಿಸಲಾಗುತ್ತದೆ. ವೀರಶೈವ ಸಮಾಜದಲ್ಲಿ ಎಲ್ಲರಿಗೂ ಸಂಸ್ಕಾರ ನೀಡುವ ಜವಾಬ್ದಾರಿ ಈ ಸಮಾಜಕ್ಕಿದೆ. ಜಂಗಮ ಸಮಾಜಕ್ಕೆ ಅತ್ಯಂತ ಉನ್ನತ ಸ್ಥಾನವಿದೆ," ಎಂದ ಶಾಸಕರು, "ಸಮಾಜದಲ್ಲಿ ತಪ್ಪುಗಳು ಸಂಭವಿಸಿದಾಗ, ನಾನೇ ತಪ್ಪು ಮಾಡಿದ್ದರೂ ಅದನ್ನು ತಿದ್ದುವ ಮತ್ತು ಕಿವಿಹಿಂಡುವ ಅಧಿಕಾರ ಜಂಗಮ ಸಮಾಜದ ಮುಖಂಡರಿಗಿದೆ," ಎಂದು ಮಾರ್ಮಿಕವಾಗಿ ನುಡಿದರು.

ಇಂದು ವೀರಶೈವ ಲಿಂಗಾಯತ ಸಮಾಜವು ಅನೇಕ ಒಳಪಂಗಡಗಳಾಗಿ ಒಡೆದು ಹೋಗುತ್ತಿರುವುದು ವಿಷಾದನೀಯ. ಉಪಜಾತಿಗಳನ್ನು ಪ್ರತ್ಯೇಕವಾಗಿ ಬರೆಯುವ ಮೂಲಕ ನಮ್ಮ ಸಂಘಟನಾ ಶಕ್ತಿ ಕುಂದುತ್ತಿದೆ. ಮುದ್ದೇಬಿಹಾಳ ಕ್ಷೇತ್ರದಲ್ಲಿ ಶೇ. 16 ರಷ್ಟು ವೀರಶೈವ ಸಮಾಜದವರಿದ್ದು, ನಾವೆಲ್ಲರೂ ಒಳಪಂಗಡಗಳ ಭೇದ ಮರೆತು ಒಂದಾಗಿ ಬಲಿಷ್ಠ ಸಮಾಜವನ್ನು ಕಟ್ಟಬೇಕಿದೆ. ಸಮಾಜವನ್ನು ಒಗ್ಗೂಡಿಸುವ ಗುರುತರ ಜವಾಬ್ದಾರಿ ಜಂಗಮ ಸಮಾಜದ ಮೇಲಿದೆ," ಎಂದು ಕರೆ ನೀಡಿದರು.

**ಹೆಚ್ಚಿನ ಅನುದಾನಕ್ಕೆ ಶಾಸಕರ ಭರವಸೆ**

ಸಮುದಾಯ ಭವನದ ಕುರಿತು ಮಾತನಾಡಿದ ಶಾಸಕರು, "ಈಗ ನೀಡಿರುವ 20 ಲಕ್ಷ ರೂ. ಅನುದಾನ ಕಟ್ಟಡ ಪೂರ್ಣಗೊಳಿಸಲು ಸಾಕಾಗುವುದಿಲ್ಲ. ಗೋವಿಂದರಾಜು ವರದಿಯ ಪ್ರಕಾರ ನಮ್ಮ ಮುದ್ದೇಬಿಹಾಳ ತಾಲ್ಲೂಕು ಹಿಂದುಳಿದ ತಾಲ್ಲೂಕು ಎಂದು ವರದಿಯಾಗಿದೆ. ಈ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ, ನಮ್ಮ ಮತಕ್ಷೇತ್ರದ ಅಭಿವೃದ್ಧಿಗೆ ಮತ್ತು ಈ ಸಮುದಾಯ ಭವನಕ್ಕೆ ಹೆಚ್ಚಿನ ಅನುದಾನ ನೀಡುವಂತೆ ಮನವಿ ಮಾಡುತ್ತೇನೆ. ಸುಸಜ್ಜಿತ ಹಾಗೂ ಭವ್ಯವಾದ ಕಟ್ಟಡ ನಿರ್ಮಾಣವಾಗಲಿ," ಎಂದು ಹಾರೈಸಿದರು.



ಕಾರ್ಯಕ್ರಮದಲ್ಲಿ ಮಾತನಾಡಿದ ಮುಖಂಡ ಮಹಾಂತೇಶ ಬೂದಿಹಾಳಮಠ ಅವರು ಗುರುಗಳ ಸಮುದಾಯ ಭವನಕ್ಕೆ ಎಲ್ಲಾ ಸಮಾಜದವರು ಕೈಜೋಡಿಸಿ ಸಹಾಯ ನೀಡಬೇಕು," ಎಂದು ಮನವಿ ಮಾಡಿದರು. ಜಂಗಮ ಸಮಾಜದ ಅಧ್ಯಕ್ಷ ದಾನಯ್ಯ ಹಿರೇಮಠ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು.

ಈ ಸಂದರ್ಭದಲ್ಲಿ ಶರಣ ಸೋಮನಾಳದ ಮಹಾದೇವ ಶಾಸ್ತ್ರೀಗಳು, ತಾಲ್ಲೂಕು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಗುರು ತಾರನಾಳ, ಪಂಚ ಗ್ಯಾರಂಟಿ ಯೋಜನೆ ತಾಲ್ಲೂಕು ಅಧ್ಯಕ್ಷ ಶಿವಶಂಕರಗೌಡ ಹಿರೇಗೌಡರ,

ಪುರಸಭೆ ಮಾಜಿ ಅಧ್ಯಕ್ಷ ಮೈಹಿಬೂಬು ಗೊಳಸಂಗಿ, ಸತೀಶ್ ಓಸ್ವಾಲ್, ಉದ್ದಿಮೆದಾರ ಸಿ.ಪಿ. ಸಜ್ಜನ, ಸುನಿಲ್ ಇಲ್ಲೂರ, ಗಣೇಶ ಅನ್ನಾಗೋಣಿ, ನೇತಾಜಿ ನಲವಡೆ,ಶ್ರೀಕಾಂತ್ ಚಲವಾದಿ, ಹಾಗೂ ಜಂಗಮ ಸಮಾಜದ ಪ್ರಮುಖರು, ಮುಖಂಡರು ಭಾಗವಹಿಸಿದ್ದರು.

# ಆಕ್ಷೇಪಣೆ ಸಲ್ಲಿಕೆಗೆ ಅವಕಾಶ

ಗದಗ: 2024-25 ನೇ ಸಾಲಿನ ರೋಣ, ಗಜೇಂದ್ರಗಡ ತಾಲ್ಲೂಕಿನ ಮುಂಗಾರು ಮತ್ತು ಹಿಂಗಾರು ಹಂಗಾಮಿನ ತಿರಸ್ಕೃತಗೊಂಡ ಬೆಳೆ ವಿಮೆ ಪ್ರಸ್ತಾವಣೆಗಳಿಗೆ ರೈತರಿಂದ ಆಕ್ಷೇಪಣೆ ಸಲ್ಲಿಸುವ ಬಗ್ಗೆ ರೋಣದ ಸಹಾಯಕ ಕೃಷಿ ನಿರ್ದೇಶಕರು, ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೆರೆ ತುಂಬಿಸಲು ಆಗ್ರಹಿಸಿ ಅಧಿಕಾರಿಗಳಿಗೆ ರೈತರ ಮನವಿ



ತಾಲ್ಲೂಕಿನ ಕೆರೆಗಳನ್ನು ತುಂಬಿಸುವಂತೆ ಆಗ್ರಹಿಸಿ ರೈತ ಮುಖಂಡ ರಾಜುಗೌಡ ಕರಡ್ಡಿ ಅಧಿಕಾರಿಗಳಿಗೆ ಮನವಿ ಸಲ್ಲಿಸಿದರು.

**ಬೆಳಗಾವಿ ವಾರ್ತೆ ಮುದ್ದೇಬಿಹಾಳ:** ತಾಲ್ಲೂಕಿನಲ್ಲಿ ಬೇಸಿಗೆಯ ಬಿರುಬಿಸಿಲು ತೀವ್ರಗೊಂಡಿದ್ದು, ಹನಿ ನೀರಿಗೂ ಹಾಹಾಕಾರ ಶುರುವಾಗಿದೆ. ಈ ಕೂಡಲೇ ತಾಲ್ಲೂಕಿನ ಎಲ್ಲ ಕೆರೆಗಳಿಗೆ ಆಲಮಟ್ಟಿ ಜಲಾಶಯದಿಂದ ನೀರು ತುಂಬಿಸಬೇಕು ಎಂದು ಆಗ್ರಹಿಸಿ ರೈತ ಮುಖಂಡ ರಾಜುಗೌಡ ಕರಡ್ಡಿ ಅವರ ನೇತೃತ್ವದಲ್ಲಿ ಶನಿವಾರ ತಹಶೀಲ್ದಾರ್ ಮುಖಾಂತರ ಕೆಬಿಜೆಎನ್‌ಎಲ್ ಅಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ಮನವಿ ಸಲ್ಲಿಸಿ ಮಾತನಾಡಿದ ಕರಡ್ಡಿ ಅವರು, ಪಕ್ಕದ ತಾಲ್ಲೂಕುಗಳ ಕೆರೆಗಳನ್ನು ತುಂಬಿಸಲಾಗಿದ್ದರೂ ಮುದ್ದೇಬಿಹಾಳ ತಾಲ್ಲೂಕಿನ ಕೆರೆಗಳ ಬಗ್ಗೆ ಅಧಿಕಾರಿಗಳು ನಿರ್ಲಕ್ಷ್ಯ ವಹಿಸಿರುವುದು ಖಂಡನೀಯ. ಅಧಿಕಾರಿಗಳು ಈಗಲೂ ಎಚ್ಚೆತ್ತುಕೊಳ್ಳದಿದ್ದರೆ ಕುಡಿಯುವ ನೀರಿಗಾಗಿ ಜನ-ಜಾನುವಾರುಗಳು ಪರಿತಪಿಸಬೇಕಾಗುತ್ತದೆ. ಮುಖ್ಯವಾಗಿ ಇಂಗಳಗೇರಿ ಕೆರೆಯನ್ನು ಮೊದಲ ಆದ್ಯತೆಯ ಮೇಲೆ ತುಂಬಿಸಬೇಕು ಎಂದು ಒತ್ತಾಯಿಸಿದರು.

ಒಂದು ವೇಳೆ ಇನ್ನು ಏಳು ದಿನಗಳ ಒಳಗಾಗಿ ನಮ್ಮ ಬೇಡಿಕೆ ಈಡೇರದಿದ್ದಲ್ಲಿ ಇಂಗಳಗೇರಿ ಹಾಗೂ ಗುಡ್ನಾಳ ಗ್ರಾಮಸ್ಥರೊಂದಿಗೆ ಸೇರಿ ಕೆಬಿಜೆಎನ್‌ಎಲ್ ಕಚೇರಿಗೆ ಮುತ್ತಿಗೆ ಹಾಕಿ ಅನಿರ್ದಿಷ್ಟಾವಧಿ ಧರಣಿ ಸತ್ಯಾಗ್ರಹ ನಡೆಸಲಾಗುವುದು ಎಂದು ಅವರು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಬಸವರಾಜ ಕುಂಟೋಜಿ, ಸಿದ್ದು ಕಡ್ಡಿ, ಆದಪ್ಪಗೌಡ ಗಬಸಾವಳಗಿ, ಶಿವಣ್ಣ ದೊರನಳ್ಳಿ ಸೇರಿದಂತೆ ನೂರಾರು ರೈತರು ಪಾಲ್ಗೊಂಡಿದ್ದರು.

# ವಿಜಯಪುರ ಕರ್ನಾಟಕದ ಸಾಂಸ್ಕೃತಿಕ ನಗರವಾಗಿದೆ: ಡಾ. ಕುಶಾಲ ಬರಗೂರು



**ಬೆಳಗಾವಿ ವಾರ್ತೆ ವಿಜಯಪುರ:** ಕಾವ್ಯಕ್ಕೆ ಸಂಗೀತ ಮತ್ತು ದೃಶ್ಯದ ಸ್ಪರ್ಶ ನೀಡಿದರೆ ಜನಮನ ತಲುಪುತ್ತದೆ ಎಂದು ಕನ್ನಡ ಪುಸ್ತಕ ಪ್ರಾಧಿಕಾರದ ಸದಸ್ಯರಾದ ಡಾ. ಕುಶಾಲ ಬರಗೂರು ಹೇಳಿದರು.

ಅವರು ನಗರದ ಗಾನಬನದ ಶ್ರೀಗುರು ಕುಮಾರೇಶ್ವರ ಸಂಗೀತ ಮಹಾವಿದ್ಯಾಲಯದಲ್ಲಿ ಕನ್ನಡ ಪುಸ್ತಕ ಪ್ರಾಧಿಕಾರ, ಮನೆಗೊಂದು ಗ್ರಂಥಾಲಯ ಜಾಗೃತ ಸಮಿತಿ ಹಾಗೂ ಸಿದ್ಧರಾಮೇಶ್ವರ ಟೆಲಿಫಿಲಂ ಆಶ್ರಯದಲ್ಲಿ ಹಮ್ಮಿಕೊಂಡ ಸೋಮು ಹಿಪ್ಪರಗಿ ಅವರ 'ವಿಜಯಪುರ' ಕನ್ನಡ ಅಲ್ಬಮ್ ಸಾಂಗ್ ಲೋಕಾರ್ಪಣೆ ಹಾಗೂ ವರ್ತಮಾನ ಕಾವ್ಯ ಸಿಂಚನ ಕವಿಗೋಷ್ಠಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಾಹಿತ್ಯದ ಓದು ವ್ಯಕ್ತಿಯ ಚಿಂತನೆಯ ಹರಿವನ್ನು ಹೆಚ್ಚಿಸುವುದರ ಜೊತೆಗೆ ಉನ್ನತ ಮಟ್ಟಕ್ಕೆ ಕೊಂಡೊಯ್ಯುವ ದಿವ್ಯ ಶಕ್ತಿಯಾಗಿದೆ. ಕವಿತೆ ಗಟ್ಟಿಗೊಳ್ಳಲು ಅಧ್ಯಯನ ಅಗತ್ಯವಾಗಿದೆ. ಕವಿ ಸೋಮು ಅವರ ವಿಜಯಪುರ ಸಾಂಸ್ಕೃತಿಕ ಪರಂಪರೆ ಸಾರುವ ಸಾಹಿತ್ಯವನ್ನು ದೃಶ್ಯಗಳಲ್ಲಿ ಸೆರೆ ಹಿಡಿದಿರುವ ನಿರ್ದೇಶಕ ಸುನೀಲಕುಮಾರ ಸುಧಾಕರ ಅವರ ಕ್ರಿಯಾಶೀಲತೆಗೆ ವಿಜಯಪುರ ಅಲ್ಬಮ್ ಸಾಂಗ್ ಹಿಡಿದ ಕೈಗನ್ನಡಿಯಾಗಿದೆ ಆ ಮೂಲಕ ವಿಜಯಪುರ ಕರ್ನಾಟಕದ ಸಾಂಸ್ಕೃತಿಕ ನಗರವಾಗಿದೆ ಎಂದರು.

ಅಲ್ಬಮ್ ಸಾಂಗ ಬಿಡುಗಡೆಗೊಳಿಸಿ ಕನ್ನಡ ಅಭಿವೃದ್ಧಿ ಪ್ರಾಧಿಕಾರ ಸದಸ್ಯರಾದ ದಾಕ್ಷಾಯಣಿ ಹುಡೇದ ಮಾತನಾಡಿ, ಇತಿಹಾಸ ಎಲ್ಲರನ್ನು ಕರೆದುಕೊಂಡು ಹೋಗುವ ಸಂದೇಶಗಳನ್ನು ಹೇಳುತ್ತದೆ. ಸಾಮರಸ್ಯದ ನೆಲೆಗಳನ್ನು ಹುಡುಕುತ್ತಾ ಹೋಗುವ ಸಂದರ್ಭದಲ್ಲಿ ಪರಸ್ಪರ ಒಬ್ಬರನ್ನೊಬ್ಬರು ಬೆಸೆಯುವ ಅಲ್ಬಮ್ ಸಾಂಗ್ ಬಿಡುಗಡೆ ಮಾಡುತ್ತಿರುವುದು ಶ್ಲಾಘನೀಯ ಕಾರ್ಯವಾದುದು ಎಂದರು.

ಈ ಸಂದರ್ಭದಲ್ಲಿ ಅತಿಥಿಗಳಾಗಿ ಆಗಮಿಸಿದ ಸಂಶೋಧಕ ಲಾಯಪ್ಪ ಇಂಗಳೆ ಮಾತನಾಡಿ, ವಿಜಯಪುರದಲ್ಲಿ ಎರಡು ಗುಮ್ಮಟಗಳಿವೆ. ಒಂದು ಭೌತಿಕ ಗೋಳ ಗುಮ್ಮಟ ಇನ್ನೊಂದು ಬೌದ್ಧಿಕ ವಚನ ಗುಮ್ಮಟ, ಭೌತಿಕ ಗುಮ್ಮಟವು ಪ್ರವಾಸಿಗರನ್ನು ತನ್ನತ್ತ ಸೆಳೆದರೆ, ಬೌದ್ಧಿಗ ವಚನ ಗುಮ್ಮಟವು ನಿರಂತರವಾಗಿ ಶರಣರ ಸಂದೇಶಗಳ ಮೂಲಕ ಎಲ್ಲರನ್ನು ಎಚ್ಚರಿಸುತ್ತಿವೆ. ವಿಶ್ವಗುರು ಬಸವಣ್ಣನವರ ವಚನ ಸಂದೇಶಗಳನ್ನು ಮಾನವ ಕುಲಕ್ಕೆ ದಾರಿದೀಪವಾಗಿವೆ. ಜನ ಬಯಸುವ ರೀತಿಯಲ್ಲಿ ನಾವು ಸಾಹಿತ್ಯವನ್ನು ಹೇಳುವ ಪರಿ ಬದಲಿಸಿಕೊಳ್ಳಬೇಕಿದೆ ಜನ ದೃಶ್ಯ ಮಾಧ್ಯಮದತ್ತ ವಾಲುತ್ತಿರುವಾಗ ಸಾಹಿತ್ಯಕ್ಕೆ ಸಂಗೀತ ಮತ್ತು ದೃಶ್ಯದ ಅಳವಡಿಕೆ ಇಂದಿನ ಕಾಲದಲ್ಲಿ ಅಗತ್ಯವಾಗಿದೆ ಆ ನಿಟ್ಟಿನಲ್ಲಿ ಸೋಮು ಮತ್ತು ಅವರ ತಂಡದ ಪ್ರಯತ್ನ ಅಭಿನಂದನಾರ್ಹವಾದುದು ಎಂದರು.

ಈ ಸಂದರ್ಭದಲ್ಲಿ ಕರ್ನಾಟಕ ಲಲಿತಕಲಾ ಅಕಾಡೆಮಿ ಸದಸ್ಯರಾದ ರಾಜೇಶ್ವರಿ ಮೋಪಗಾರ ಮಾತನಾಡಿ, ಚಿತ್ರ ಕಲಾವಿದರು ತಮ್ಮ ಲಲಿತ ಕಲೆಗಳ ಮೂಲಕ ಭಾವನೆಗಳನ್ನು ಕಟ್ಟಿಕೊಟ್ಟರೆ ಕವಿ ಸಾಹಿತ್ಯದ ಮೂಲಕ ಭಾವನೆಗಳನ್ನು ಅಭಿವ್ಯಕ್ತಗೊಳಿಸುತ್ತಾನೆ. ಚಲನಚಿತ್ರ ನಿರ್ದೇಶಕ ಭಾವನೆಗಳಿಗೆ ಜೀವ ತುಂಬುವ ಕೆಲಸ ಮಾಡುತ್ತಾನೆ. ಪ್ರಸ್ತುತ ಸಂದರ್ಭದಲ್ಲಿ ವಿಜಯಪುರ ಕನ್ನಡ ಅಲ್ಬಮ್ ಸಾಂಗ್ ಉದಾಹರಣೆಯಾಗಿದೆ ಎಂದರು.

ಈ ಸಂದರ್ಭ ಕವಿ ಸೋಮು ಹಿಪ್ಪರಗಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಕವಿಗೋಷ್ಠಿಯಲ್ಲಿ ಗೀತಾ ಸನದಿ, ಮುರುಗೇಶ ಸಂಗಮ, ಭೀಮರಾವ ಉಪ್ಪಾರ, ಭರತಕುಮಾರ ಎಚ್.ಟಿ., ಕಲ್ಲಪ್ಪ ಶಿವಶರಣ, ಲಕ್ಷ್ಮೀ ಗೋಡೆಕರ, ಪ್ರಶಾಂತ ಬಿಳೆಭಾವಿ, ಜಯಶ್ರೀ ಚಲವಾದಿ, ಮಲ್ಲಿಕಾರ್ಜುನ ನಾಟೀಕಾರ, ಧಾನೇಶ್ವರಿ ಆಲಾಳೆ, ಶಿವಾಜಿ ಮೋರೆ, ರೇಣುಕಾ ಕೋಟ್ಯಾಳ ಅವರು ತಮ್ಮ ಸ್ವರಚಿತ ಕವಿತೆಗಳನ್ನು ವಾಚಿಸಿದರು.

ಇದೇ ಸಂದರ್ಭ ಸರ್ಕಾರಿ ಮೆಡಿಕಲ್ ಕಾಲೇಜು ಹೋರಾಟಗಾರರಾದ ನೀಲಾಂಬಿಕಾ ಕಟ್ಟಿಮನಿ, ಶಿವರಂಜಿನಿ ಉಪ್ಪಾರ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಶ್ರೀ ಗುರು ಕುಮಾರೇಶ್ವರ ಸಂಗೀತ ಮಹಾವಿದ್ಯಾಲಯದ ಗಾನ ಬನದ ಪಂಡಿತ ತೋಂಟದಾರ್ಯ ಕವಿಗವಾಯಿಗಳು ವೇದಿಕೆಯಲ್ಲಿ ಇದ್ದರು.

ಕಾರ್ಯಕ್ರಮದಲ್ಲಿ ಅಲ್ಬಾಮ್ ಸಾಂಗ್ ನಲ್ಲಿ ಅಭಿನಯಿಸಿದ ಕಲಾವಿದರು ಹಾಗೂ ಗಾನಬದನ ವಿದ್ಯಾರ್ಥಿಗಳಿಗೆ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಕಮಲಾಬಾಯಿ ಹಿಪ್ಪರಗಿ, ಲಕ್ಷ್ಮೀ ಸೇಜಾಳ, ದುಂಡಮ್ಮ ಹಿಪ್ಪರಗಿ, ರಾಮನಗೌಡ ಚೌಧ್ರಿ,

ಶ್ರೀಕಾಂತ ಮೆಂಡೆಗಾರ, ಭೀಮರಾಯ ಕುಂಟೋಜಿ, ಪ್ರಕಾಶ ಚೌಧ್ರಿ, ಆನಂದ ಕುಂಟೋಜಿ, ಎ.ಎಚ್.ಕೊಳಮಲಿ, ಶರಣಗೌಡ ಪಾಟೀಲ, ಉಮೇಶ ಶಿವಶರಣ, ದೀಪಕ ಶಿಂಧೆ, ಸೋಮಶೇಖರ ಕುರ್ಲೆ, ವಿನೋದ ಪಟ್ಟಣದ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

# ಬೆಳಗಾವಿ ಸಾಮಾಜಿಕ ಬಹಿಷ್ಕಾರ ಪ್ರಕರಣ: 9 ಮಂದಿ ವಿರುದ್ಧ ಪ್ರಕರಣ ದಾಖಲು

**ಬೆಳಗಾವಿ ವಾರ್ತೆ ಬೆಳಗಾವಿ:** ಬೆಳಗಾವಿ ಗ್ರಾಮಾಂತರ ಕ್ಷೇತ್ರದ ಕೊಂಡಸ್ಕೊಪ್ಪ ಗ್ರಾಮದಲ್ಲಿ ಕುಟುಂಬವೊಂದರ ಮೇಲೆ ಸಾಮಾಜಿಕ ಬಹಿಷ್ಕಾರ ಹೇರಿದ ಆರೋಪದಲ್ಲಿ ಒಂಬತ್ತು ಮಂದಿಯ ವಿರುದ್ಧ ಪ್ರಕರಣ ದಾಖಲಾಗಿದೆ.

ಹಿರೇಬಾಗೇವಾಡಿ ಪೊಲೀಸರು ಒಂಬತ್ತು ಜನರ ವಿರುದ್ಧ ಪ್ರಕರಣ ದಾಖಲಿಸಿಕೊಂಡು ಕ್ರಮ ಕೈಗೊಂಡಿದ್ದಾರೆ. ಗ್ರಾಮದ ನಾಯಕ ಚಿತ್ರಹಿಂಸೆ ಸಹಿಸಲಾರದೆ ಕುಟುಂಬ ಗ್ರಾಮವನ್ನೇ ತೊರೆದಿತ್ತು. ಈ ಕುರಿತು ದಿ ನ್ಯೂ ಇಂಡಿಯನ್ ಎಕ್ಸ್ ಪ್ರೆಸ್ ವರದಿ ಮಾಡಿತ್ತು.

ನರಸೋಬ ಸಾಂಬ್ರೇಕರ್ ಅವರು ಸ್ಥಳೀಯ ಬೀರದೇವರ ದೇವಸ್ಥಾನದ ಪೂಜಾರಿಗಳಾಗಿದ್ದು, ದೇವಸ್ಥಾನದ ಆಚರಣೆಗಳಿಗೆ ಸಂಬಂಧಿಸಿದ ವಿವಾದ ಮತ್ತು ಕುಟುಂಬದ ಒಬ್ಬ ಸದಸ್ಯನ ಅಂತರ್ ಸಮುದಾಯ ಸಂಬಂಧ ವಿಚಾರವನ್ನು ಮುಂದಿಟ್ಟುಕೊಂಡು ಗ್ರಾಮದ ಕೆಲವರು ಕುಟುಂಬವನ್ನು



ಸಮಾಜದಿಂದ ದೂರ ಇಡುವಂತೆ ಆಜ್ಞೆ ಹೊರಡಿಸಿದ್ದರು. ಅಲ್ಲದೆ, ಕುಟುಂಬದೊಂದಿಗೆ ಮಾತನಾಡಿದವರಿಗೆ ರೂ.5 ಸಾವಿರ ದಂಡ ವಿಧಿಸಲಾಗುತ್ತದೆ. ಮಾಹಿತಿ ನೀಡಿದವರಿಗೆ ರೂ.1 ಸಾವಿರ ಬಹುಮಾನ ಎಂದೂ ಘೋಷಿಸಿದ್ದರು. ಈ ಕುರಿತು ಸಾಂಬ್ರೇಕರ್ ಅವರು ನೀಡಿದ ದೂರಿನ ಆಧಾರದ ಮೇಲೆ ಇದೀಗ ಪ್ರಕರಣ ದಾಖಲಾಗಿದೆ.

ಮಲ್ಲಪ್ಪ ಸಂಬರೇಕರ್, ವಿಠ್ಠಲ್ ಸಂಬರೇಕರ್, ಬಾಗಣ್ಣ ಸಂಬರೇಕರ್, ರಮೇಶ್ ಸಂಬರೇಕರ್, ಮಾಲಿಂಗ ಸಂಬರೇಕರ್, ಗಂಗಪ್ಪ ಸಂಬರೇಕರ್, ವೈಜು ಸಂಬರೇಕರ್, ಪಿರಾಜಿ ಸಂಬರೇಕರ್ ಮತ್ತು ಯಲ್ಲಪ್ಪ ಸಂಬರೇಕರ್ ವಿರುದ್ಧ ಪ್ರಕರಣ ದಾಖಲಾಗಿದೆ.

ಪೊಲೀಸರ ಮಾಹಿತಿ ಪ್ರಕಾರ, ಏಪ್ರಿಲ್ 6ರಂದು ಮೊದಲು ದೂರು ಸಲ್ಲಿಕೆಯಾಗಿದ್ದು, ಪ್ರಾಥಮಿಕ ತನಿಖೆ ನಡೆಸಿದ ನಂತರ ಈಗ ಅಧಿಕೃತವಾಗಿ ಪ್ರಕರಣ ದಾಖಲಿಸಲಾಗಿದೆ ಎಂದು ತಿಳಿದುಬಂದಿದೆ. ಸಾಮಾಜಿಕ ಬಹಿಷ್ಕಾರ ಮತ್ತು ಬೆದರಿಕೆ ಸಂಬಂಧಿತ ವಿಧಿಗಳ ಅಡಿಯಲ್ಲಿ ಪ್ರಕರಣ ದಾಖಲಾಗಿದೆ.

ಪ್ರಸ್ತುತ ಸಂತ್ರಸ್ತ ಕುಟುಂಬ ಹಾಗೂ ಗ್ರಾಮಸ್ಥರ ಹೇಳಿಕೆಗಳನ್ನು ದಾಖಲಿಸಲಾಗುತ್ತಿದ್ದು, ಬಹಿಷ್ಕಾರ ಹೇಗೆ ಜಾರಿಗೊಂಡಿತು, ಇದರಲ್ಲಿ ಆರೋಪಿಗಳ ಪಾತ್ರ ಏನು ಎಂಬುದನ್ನು ಪೊಲೀಸರು ಪರಿಶೀಲಿಸುತ್ತಿದ್ದಾರೆ. ತನಿಖೆಯ ಪ್ರಗತಿಯ ಆಧಾರದಲ್ಲಿ ಮುಂದಿನ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

# ಬಾವಿ ಗೋಡೆ ಕುಸಿದು ಇಬ್ಬರು ಮಕ್ಕಳ ದುರ್ಮರಣ..!



**ಬೆಳಗಾವಿ ವಾರ್ತೆ ಬೆಳಗಾವಿ:** ಬೆಳಗಾವಿ ನಗರದ ಕಪಿಲೇಶ್ವರ ದೇವಸ್ಥಾನ ಸಮೀಪ ಭಾನುವಾರ ಬೆಳಿಗ್ಗೆ ನಡೆದ ದಾರುಣ ಘಟನೆಯಲ್ಲಿ ಇಬ್ಬರು ಬಾಲಕರು ಮೃತಪಟ್ಟಿದ್ದಾರೆ.

ಬಾವಿಯ ಗೋಡೆಯ ಒಂದು ಭಾಗ ಆಕಸ್ಮಿಕವಾಗಿ ಕುಸಿದ ಪರಿಣಾಮ ಈ ಅವಘಡ ಸಂಭವಿಸಿದೆ. ಮಕ್ಕಳು ಮೊದಲು ಸಮೀಪದ ಕಪಿಲೇಶ್ವರ ಕೆರೆಯಲ್ಲಿ ಈಜಾಟ ನಡೆಸಿ ಬಳಿಕ ಬಾವಿ ಕಟ್ಟೆ ಮೇಲೆ ಕುಳಿತಿದ್ದ ವೇಳೆ ಗೋಡೆ ಕುಸಿದು ಬಿದ್ದಿದೆ. ಈ ವೇಳೆ ಮಕ್ಕಳು ಬಾವಿಗೆ ಬಿದ್ದು ಸಾವನ್ನಪ್ಪಿದ್ದಾರೆ.

ಮೃತರನ್ನು ಶಿವಂ ಪರಶುರಾಮ ಸುಂದೀಕರ (7) ಮತ್ತು ಪರಶುರಾಮ ರಾಜು ನಿಲಾಜ್ಕರ್ (11) ಎಂದು ಗುರುತಿಸಲಾಗಿದೆ.

ಘಟನೆ ಸಂಭವಿಸುತ್ತಿದ್ದಂತೆಯೇ ತಕ್ಷಣವೇ ಅಗ್ನಿಶಾಮಕ ದಳ ಹಾಗೂ ರಾಜ್ಯ ವಿಪತ್ತು ನಿರ್ವಹಣಾ ಪಡೆ (ಖಆಖಈ) ಸಿಬ್ಬಂದಿ ಸ್ಥಳಕ್ಕಾಗಮಿಸಿ ರಕ್ಷಣಾ ಕಾರ್ಯಾಚರಣೆ ಆರಂಭಿಸಿದರು. ಶ್ರಮಪಟ್ಟು ಕಾರ್ಯಾಚರಣೆ ನಡೆಸಿದರೂ ಮಕ್ಕಳನ್ನು ರಕ್ಷಿಸಲು ಸಾಧ್ಯವಾಗಲಿಲ್ಲ.

ಸುದ್ದಿ ಹರಡುತ್ತಿದ್ದಂತೆಯೇ ಪ್ರದೇಶದಲ್ಲಿ ಆತಂಕದ ವಾತಾವರಣ ಸೃಷ್ಟಿಯಾಗಿತ್ತು. ಮಕ್ಕಳ ಸಾವು ದೃಢವಾಗುತ್ತಿದ್ದಂತೆಯೇ ಪೋಷಕರ ಆಕ್ರಂದನ ಮುಗಿಲು ಮುಟ್ಟಿತ್ತು.

ಸ್ಥಳಕ್ಕೆ ಬೆಳಗಾವಿ ಮಹಾನಗರ ಪಾಲಿಕೆ ಅಧಿಕಾರಿಗಳೂ ಭೇಟಿ ನೀಡಿ ಸಹಕಾರ ನೀಡಿದರು. ಒಬ್ಬ ಬಾಲಕನ ಶವವನ್ನು ಪತ್ತೆ ಹಚ್ಚಲಾಗಿದ್ದು, ಮತ್ತೊಬ್ಬನಿಗಾಗಿ ಶೋಧ ಕಾರ್ಯ ಮುಂದುವರಿದಿದೆ.

ಬಾವಿಯೊಳಗೆ ಇನ್ನಾರೂ ಸಿಲುಕಿಕೊಂಡಿಲ್ಲವೆಂಬುದನ್ನು ಖಚಿತಪಡಿಸಲು ಕ್ಯಾಮೆರಾ ಬಳಕೆ ಮಾಡಲಾಗುತ್ತಿದ್ದು, ಶೋಧ ಪ್ರಕ್ರಿಯೆಯನ್ನು ಸುಗಮಗೊಳಿಸಲು ನೀರನ್ನು ಪಂಪ್ ಮಾಡುವ ಕಾರ್ಯ ಪ್ರಾರಂಭಿಸಿದ್ದಾರೆ.

# ಭಕ್ತರ ರಕ್ಷಣೆ : ಭಗವಂತನ ಕರುಣೆ



ಸತ್ತೂರು: ಹಲವಾರು ಕ್ಷೇತ್ರಗಳಲ್ಲಿ, ಹಲವಾರು ಮನೆ ಮನೆಗಳಲ್ಲಿ ಶ್ರೀ ನರಸಿಂಹದೇವರ ಕುಲಧರ್ಮವನ್ನು ಆಚರಿಸುತ್ತಾರೆ , ವಿಶೇಷವಾಗಿ ಪ್ರಹ್ಲಾದನು 7 ನೇ ವಯಸ್ಸಿನಲ್ಲಿ ತೋರಿದ ಅಚಲವಾದ ಭಕ್ತಿ ಮತ್ತು ಭಗವಂತನು ಎಲ್ಲದರಲ್ಲೂ ಜಡ ವಸ್ತುವಿನಲ್ಲೂ ಸಹ ತಾನು ಇದ್ದೇನೆ ಎಂದು ನಿರೂಪಿಸುವುದಕ್ಕಾಗಿ ನರಸಿಂಹ ದೇವರ ಅವತಾರ ಎತ್ತಿದ. ಪ್ರಹ್ಲಾದನ ತಂದೆ ಹಿರಣ್ಯ ಕಶ್ಯಪು ಘೋರ ತಪಸ್ಸು ಮಾಡಿ, ಯಾರಿಂದಲೂ ಯಾವ ಶಸ್ತ್ರಾದಿಗಳೆಂದು, ಹಗಲು ರಾತ್ರಿ, ಮನೆಯ ಹೊರಗೆ ಒಳಗೂ ,ಸಾವು ಬರಬಾರದೆಂದು ಬ್ರಹ್ಮ ದೇವರಿಂದ ವಿಶೇಷವಾದ ವರವನ್ನು ಪಡೆದಿದ್ದಾನೆ, ಆದರ ನಿವಾರಣೆ, ಪ್ರಹ್ಲಾದ ರಕ್ಷಣೆ ಭಗವಂತನ ಕರುಣೆಯ ಮೂಲಕ ಕಂಬದಿಂದ ಭಯಂಕರ ಉಗ್ರ ರೂಪವಾಗಿ ಪ್ರಕಟವಾಗಿದ್ದಾನೆ ಎಂದು ಪಂ. ಮುರಳಿಧರ ಆಚಾರ್ಯ ತಿಳಿಸಿದರು.

ಸತ್ತೂರಿನ ನಾರಾಯಣ ಪಾರಾಯಣ ಬಳಗದ ಆಶ್ರಯದಲ್ಲಿ ಶ್ರೀ ವಿಶ್ವನಾಥ ಕಾಂಗೋ ಇವರ ಮನೆಯಲ್ಲಿ ಜರುಗಿದ, ಶ್ರೀ ನರಸಿಂಹ ಸ್ತುತಿ ಕುರಿತು ವಿಶೇಷ ಉಪನ್ಯಾಸ ಮಾಲಿಕೆಯಲ್ಲಿ ಮಾತನಾಡುತ್ತಾ ಉಗ್ರ ರೂಪ ತಾಳಿದ, ಮಾನವನು ಅಲ್ಲದ, ಮೃಗವು ಅಲ್ಲದ ಅರ್ಧ ನರ ಅರ್ಧ ಸಿಂಹದ ರೂಪದಲ್ಲಿ ಅವತರಿಸಿದ ಶ್ರೀ ನರಸಿಂಹದೇವರು ಶಾಂತನಾಗಲು ಬ್ರಹ್ಮ ,ವಾಯು ಇಂದ್ರ ಮುಂತಾದ ದೇವಾದಿ ದೇವತೆಗಳು, ಯಕ್ಷರು, ಕಿನ್ನರು, ಇತರ ದೇವತೆಗಳು ದಿಕ್ಪಾಲಕರು ಪ್ರಾರ್ಥಿಸಿದರು ಶಾಂತನಾಗದವನು, ಪುಟ್ಟ ಪ್ರಹ್ಲಾದನ ವಿನಂತಿಗೆ ಶಾಂತ ರೂಪ ತೋರಿಸಿದನು. ಈ ಪ್ರಹ್ಲಾದನ ಚರಿತ್ರೆಯಲ್ಲಿ ಸತ್ಯವಂತಿಕೆ ಶ್ರದ್ಧಾಭಕ್ತಿ ದೇವರಲ್ಲಿ ಮಾಡಿದರೆ ಸಾಕ್ಷಾತ್ಕಾರ ಖಂಡಿತ ನರಸಿಂಹ ಸ್ತುತಿಯನ್ನು ನಾವು ಪಾರಾಯಣ ಪಠಿಸಿದರೆ ಅಪಮೃತ್ಯು ನಿವಾರಣೆ ಕಷ್ಟ ಕಾರ್ಪಣ್ಯ ನಿವಾರಣೆ ಪಾಪ ವಿಮೋಚನೆಗೊಂಡು, ಸತ್ಯವಾದ ಭಕ್ತಿ ದೇವರು ನಮ್ಮನ್ನು ಸದಾ ರಕ್ಷಿಸುತ್ತಾನೆ ಲೌಕಿಕ ಉದಾಹರಣೆಗಳೊಂದಿಗೆ ವಿಶ್ಲೇಷಿಸಿದರು.

ಕಾರ್ಯಕ್ರಮದ ಪೂರ್ವದಲ್ಲಿ ಬಳಗದ ಸದಸ್ಯರಿಂದ ಶ್ರೀ ಹರಿ ವಾಯು ಗುರುಗಳ ಸ್ತೋತ್ರಗಳ ಪಾರಾಯಣ ಜರುಗಿತು. ಕಾರ್ಯಕ್ರಮದಲ್ಲಿ ರಘೋತ್ತಮ ಅವಧಾನಿ, ಕೃಷ್ಣ ಹುನಗುಂದ, ಹನುಮಂತ ಪುರಾಣಿಕ, ಎಸ್.ಎಂ ಜೋಶಿ, ಕೇಶವ ಕುಲಕರ್ಣಿ ಆನಂದ ದೇಶಪಾಂಡೆ ಎಲ್ ವಿ ಜೋಶಿ, ರಾಘವೇಂದ್ರ ಮುಂಡಗೋಡ ಪಾಂಡುರಂಗ ಕುಲಕರ್ಣಿ ಉಪಸ್ಥಿತರಿದ್ದರು.

# ಹುಬ್ಬಳ್ಳಿ–ಧಾರವಾಡ ಪೊಲೀಸರ ವಿರುದ್ಧ ಸ್ವಪಕ್ಷದ ಸರ್ಕಾರದ ಮೇಲೆಯೇ ಸಿಡಿದೆದ್ದ ಕಾಂಗ್ರೆಸ್ ಶಾಸಕ!

ಹುಬ್ಬಳ್ಳಿ: ವಿರೋಧ ಪಕ್ಷದ ನಾಯಕರು ಆಡಳಿತ ಸರ್ಕಾರದ ಕಾನೂನು ಸುವ್ಯವಸ್ಥೆಯ ಬಗ್ಗೆ ಟೀಕಿಸುವುದು ಸಹಜ. ಆದರೆ, ಹುಬ್ಬಳ್ಳಿ–ಧಾರವಾಡದಲ್ಲಿ ಸ್ವತಃ ಆಡಳಿತಾರೂಢ ಕಾಂಗ್ರೆಸ್ ಶಾಸಕರೇ ತಮ್ಮದೇ ಸರ್ಕಾರದ ಪೊಲೀಸ್ ವ್ಯವಸ್ಥೆಯ ವಿರುದ್ಧ ಗಂಭೀರ ಆರೋಪ ಮಾಡಿರುವುದು ಭಾರಿ ಸಂಚಲನ ಮೂಡಿಸಿದೆ. ಅವಳಿ ನಗರದಲ್ಲಿ ಪೊಲೀಸರೇ ರಿಯಲ್ ಎಸ್ಟೇಟ್ ದಂಧೆಗಿಳಿದಿದ್ದಾರೆ ಎಂದು ಆರೋಪಿಸಿರುವ ಕೈ ಶಾಸಕ, ತಕ್ಷಣವೇ ಇಲ್ಲಿನ ಎಲ್ಲಾ ಪೊಲೀಸ್ ಅಧಿಕಾರಿಗಳನ್ನು ಎತ್ತಂಗಡಿ ಮಾಡುವಂತೆ ಗೃಹ ಸಚಿವರಿಗೆ ಮನವಿ ಮಾಡಿದ್ದಾರೆ.

**ಪೊಲೀಸರ ವರ್ತನೆಗೆ ಬೇಸತ್ತ ಶಾಸಕ ಪ್ರಸಾದ್ ಅಬ್ಬಯ್ಯ:** ವ್ಯಾಪಾರದ ಕೇಂದ್ರವಾದ ಹುಬ್ಬಳ್ಳಿ ಹಾಗೂ ಶಿಕ್ಷಣ ಕಾಶಿ ಧಾರವಾಡದಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣವಾಗಿ ಹದಗೆಟ್ಟಿದೆ. ನ್ಯಾಯ ಕೊಡಿಸಬೇಕಾದ ಪೊಲೀಸರೇ ಹಣಕ್ಕಾಗಿ ಅನ್ಯಾಯದ ಮಾರ್ಗ ಹಿಡಿದಿದ್ದಾರೆ ಎಂದು ಹುಬ್ಬಳ್ಳಿ ಪೂರ್ವ ಕ್ಷೇತ್ರದ ಕಾಂಗ್ರೆಸ್ ಶಾಸಕ ಪ್ರಸಾದ್ ಅಬ್ಬಯ್ಯ ತೀವ್ರ ಅಸಮಾಧಾನ ಹೊರಹಾಕಿದ್ದಾರೆ.



"ಅವಳಿ ನಗರದ ಪೊಲೀಸ್ ಇಲಾಖೆಯಲ್ಲಿ ಯಾವುದೂ ಸರಿಯಿಲ್ಲ. ರೌಡಿಶೀಟರ್‌ಗಳಿಗೆ ಮತ್ತು ಅಕ್ರಮ ದಂಧೆಕೋರರಿಗೆ ಪೊಲೀಸರೇ ಬೆಂಬಲ ನೀಡುತ್ತಿದ್ದಾರೆ. ಹೀಗಾಗಿ, ಇಲ್ಲಿರುವ ಎಲ್ಲಾ ಅಧಿಕಾರಿಗಳನ್ನು ವರ್ಗಾವಣೆ ಮಾಡಿ, ದಕ್ಷ ಹಾಗೂ ಪ್ರಾಮಾಣಿಕ ಅಧಿಕಾರಿಗಳನ್ನು ನೇಮಿಸುವಂತೆ ಗೃಹ ಸಚಿವರಿಗೆ ಮನವಿ ಮಾಡಿದ್ದೇನೆ. ಶೀಘ್ರದಲ್ಲೇ ಮುಖ್ಯಮಂತ್ರಿಗಳನ್ನೂ ಭೇಟಿಯಾಗಿ ಈ ಬಗ್ಗೆ ದೂರು ನೀಡುತ್ತೇನೆ," ಎಂದು ಪ್ರಸಾದ್ ಅಬ್ಬಯ್ಯ ಖಡಕ್ ಎಚ್ಚರಿಕೆ ನೀಡಿದ್ದಾರೆ.

**ವಿದ್ಯಾರ್ಥಿ ಆತ್ಮಹತ್ಯೆ ಬಳಿಕ ಭುಗಿಲೆದ್ದ ಆಕ್ರೋಶ:** ಇತ್ತೀಚೆಗಷ್ಟೇ ಧಾರವಾಡದಲ್ಲಿ ಪೊಲೀಸರ ಕಿರುಕುಳ ಹಾಗೂ ಹಣದ ಬೇಡಿಕೆಗೆ ಬೇಸತ್ತು ವಿದ್ಯಾರ್ಥಿಯೊಬ್ಬ ನೇಣಿಗೆ ಶರಣಾಗಿದ್ದ ಘಟನೆ ಇಡೀ ರಾಜ್ಯವನ್ನೇ ಬೆಚ್ಚಿಬೀಳಿಸಿತ್ತು. ಇದರ ಬೆನ್ನಲ್ಲೇ ಪೊಲೀಸರ ಮೇಲಿನ ಜನಾಕ್ರೋಶ ಮತ್ತಷ್ಟು ಹೆಚ್ಚಾಗಿದೆ. ಅವಳಿ ನಗರದಲ್ಲಿ ಕ್ರಿಕೆಟ್ ಬೆಟ್ಟಿಂಗ್, ಅಕ್ರಮ ಅಕ್ಕಿ ಸಾಗಾಟ ಹಾಗೂ ಡ್ರಗ್ಸ್ ದಂಧೆಗಳು ಪೊಲೀಸರ ಕಣ್ಮುಂದೆಯೇ ನಡೆಯುತ್ತಿದ್ದರೂ ಯಾವುದೇ ಕಠಿಣ ಕ್ರಮ ಜರುಗಿಸುತ್ತಿಲ್ಲ.

ನ್ಯಾಯ ಕೇಳಿ ಠಾಣೆ ಮೆಟ್ಟಿಲೇರುವ ಅಮಾಯಕರ ಬಳಿಯೇ ಲಂಚ ವಸೂಲಿ ಮಾಡಲಾಗುತ್ತಿದೆ ಎಂಬ ಗಂಭೀರ ಆರೋಪಗಳು ಸಾರ್ವಜನಿಕ ವಲಯದಲ್ಲಿ ಕೇಳಿಬರುತ್ತಿವೆ. ಪೊಲೀಸ್ ಕಮಿಷನರೇಟ್ ವ್ಯಾಪ್ತಿಯಲ್ಲಿ ಬೆರಳೆಣಿಕೆಯಷ್ಟು ಪ್ರಾಮಾಣಿಕ ಅಧಿಕಾರಿಗಳಿದ್ದರೂ, ಭ್ರಷ್ಟರ ಹಾವಳಿಯಿಂದಾಗಿ ಇಡೀ ಇಲಾಖೆಗೆ ಕಳಂಕ ಅಂಟಿದೆ.

ಇದೀಗ ಸ್ವತಃ ಆಡಳಿತ ಪಕ್ಷದ ಶಾಸಕರೇ ಭ್ರಷ್ಟ ಪೊಲೀಸರ ವಿರುದ್ಧ ಸಮರ ಸಾರಿದ್ದಾರೆ. ಗೃಹ ಇಲಾಖೆಯು ಶಾಸಕರ ಈ ಕೂಗಿಗೆ ಬೆಲೆ ಕೊಟ್ಟು, ಹುಬ್ಬಳ್ಳಿ–ಧಾರವಾಡದ ಪೊಲೀಸ್ ಅಧಿಕಾರಿಗಳಿಗೆ ಗೇಟ್‌ಪಾಸ್ ನೀಡುತ್ತಾ ಎಂಬುದನ್ನು ಕಾದುನೋಡಬೇಕಿದೆ.

# ಹಾಳಾದ ಕೊನೆ ಗ್ರಾಮದ ರಸ್ತೆ

ಲಕ್ಷ್ಮೇಶ್ವರ: ಗದಗ ಜಿಲ್ಲೆಯ ಲಕ್ಷ್ಮೇಶ್ವರ ತಾಲೂಕಿನ ಕೊನೆಯ ಗ್ರಾಮವಾದ ಬಾಲೆ ಹೊಸೂರು ಮೂಲಭೂತವಾದ ರಸ್ತೆಯಿಂದ ವಂಚಿತವಾಗಿದ್ದು ಈ ರಸ್ತೆಗೆ ಹಿಡಿದಿರುವ ಗ್ರಹಣಕ್ಕೆ ಕೊನೆಯಿಲ್ಲವೇ ಎಂಬ ಪ್ರಶ್ನೆ ಈ ಗ್ರಾಮದ ಜನರನ್ನು ಕಾಡುತ್ತಿದೆ.

ಲೋಕೋಪಯೋಗಿ ಇಲಾಖೆಯ ಜಿಲ್ಲಾ ಮುಖ್ಯ ರಸ್ತೆಯಾದ ಬಾಲೆ ಹೊಸೂರು ಗ್ರಾಮದಿಂದ ಸೂರಣಗಿ ವರೆಗಿನ ರಸ್ತೆ ಬಹುತೇಕ ಸಂಪೂರ್ಣ ಹಾಳಾಗಿದ್ದು ಈ ರಸ್ತೆಯನ್ನು ಸುಧಾರಣೆ ಮಾಡುವಂತೆ 10 ವರ್ಷಗಳಿಂದ ನೂರಾರು ಅರ್ಜಿಗಳನ್ನು ಮನವಿಗಳನ್ನು ಸಂಬಂಧಿಸಿದ ಇಲಾಖೆಗೆ ಜನಪ್ರತಿನಿಧಿಗಳಿಗೆ ಜಿಲ್ಲಾಧಿಕಾರಿಗಳಿಗೆ ಸಲ್ಲಿಸಿದ್ದರು ಯಾರೊಬ್ಬರು ಈ ಗ್ರಾಮದ ರಸ್ತೆಯ ಬಗ್ಗೆ ತಲೆಕೆಡಿಸಿಕೊಂಡಿಲ್ಲ.

ಪ್ರತಿನಿತ್ಯ ವ್ಯಾಪಾರ ವಹಿವಾಟು ಶಾಲಾ ಕಾಲೇಜು ಸೇರಿದಂತೆ ಎಲ್ಲ ಕೆಲಸ ಕಾರ್ಯಗಳಿಗೂ ಲಕ್ಷ್ಮೇಶ್ವರಕ್ಕೆ ಹೋಗಬೇಕಾಗಿದ್ದು ಆದರೆ ಈ ರಸ್ತೆಯ ಸ್ಥಿತಿ ಅಯೋಮಯವಾಗಿದೆ.

ಈ ಕುರಿತು ಗ್ರಾಮ ಅಭಿವೃದ್ಧಿ ಹೋರಾಟ ಸಮಿತಿಯ ಸಂಚಾಲಕ ರಾಜು ಬೆಂಚಿಹಳ್ಳಿ ಪ್ರತಿಕ್ರಿಯೆ ನೀಡಿ ರಸ್ತೆ ಸಂಬಂಧಪಟ್ಟಂತೆ ಮನವಿ ಅರ್ಜಿಗಳನ್ನು ಕೊಟ್ಟು ಸಾಕಾಗಿ ಹೋಗಿದೆ ಸರ್ಕಾರ ರಸ್ತೆ ಮಾಡುವುದಿಲ್ಲ ಎಂದಾದರೆ ದಯಾಮರಣಕ್ಕಾದರೂ ಅನುಮತಿ ನೀಡಿ ಎಂದು ಆಕ್ರೋಶ ವ್ಯಕ್ತಪಡಿಸಿದ್ದು ತಾಳ್ಮೆಯನ್ನು ಪರೀಕ್ಷಿಸಬೇಡಿ



ಮುಂದಾಗುವ ಯಾವುದೇ ಅನಾಹುತಕ್ಕೆ ಸರ್ಕಾರವೇ ನೇರ ಹೊಣೆ ಎಂದು ಎಚ್ಚರಿಸಿದ್ದಾರೆ.

# ಅರ್ಜಿ ಆಹ್ವಾನ

ಗದಗ: ಚಾಮರಾಜೇಂದ್ರ ಸರ್ಕಾರಿ ದೃಶ್ಯಕಲಾ ಕಾಲೇಜು ( ಕಾವಾ) , ಮೈಸೂರು ಸಂಸ್ಥೆಯಲ್ಲಿ 2026–27 ನೇ ಸಾಲಿಗೆ ಮಾತ್ರ ಅತಿಥಿ ಉಪನ್ಯಾಸಕರು/ ಸಂಪನ್ಮೂಲ ವ್ಯಕ್ತಿಯಾಗಿ ಕಾರ್ಯನಿರ್ವಹಿಸಲು ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸ್ವೀಕರಿಸಲು ಕೊನೆಯ ದಿನ ಮೇ 15 ಆಗಿದ್ದು, ಮೇ 19 ರಂದು ಬೆಳಿಗ್ಗೆ 11 ಗಂಟೆಗೆ ಸಂದರ್ಶನವನ್ನು ಸಂಸ್ಥೆಯಲ್ಲಿ ನಡೆಸಲಾಗುವುದು. ತರಗತಿಗಳು ಅನ್ವಯವಾಗುವಂತೆ ಕಾರ್ಯನಿರ್ವಹಿಸಲು ತಿಳಿಸಲಾಗುವುದು. ಆಸಕ್ತ ಅಭ್ಯರ್ಥಿಗಳು ಕರ್ನಾಟಕ ಸರ್ಕಾರದ ಅಂತರ್ಜಾಲ ವಿಳಾಸ ತಿತಿತಿ.ಟಥಿಂಡಿಜ.ಟಿಥಿ.ಏಟಿ ಮತ್ತು www.cavamysore.karnataka.gov.in ಅಂತರ್ಜಾಲದ ಮೂಲಕ ಮಾಹಿತಿಯನ್ನು ಪಡೆಯಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಕಾರ್ಯಾಲಯದ ದೂರವಾಣಿ ಸಂಖ್ಯೆ 0821–2438931 ಸಂಪರ್ಕಿಬಹುದಾಗಿದೆ.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307. Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI, KARNATAKA - 590001